# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU
ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 45 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಸೋಮವಾರ ದಿನಾಂಕ : 24-08-2026 ಪುಟ : 04 ಬೆಲೆ : 2-00


## ಸಂಪೂರ್ಣ ಸ್ವದೇಶಿ ನಿರ್ಮಿತ ಮೊದಲ ಎಕೆ-203 ರೈಫಲ್ ಪರೀಕ್ಷೆ ಯಶಸ್ವಿ



ನವದೆಹಲಿ: ರಕ್ಷಣಾ ಕ್ಷೇತ್ರದಲ್ಲಿ ಸಂಪೂರ್ಣ ಸ್ವಾವಲಂಬನೆ ಸಾಧಿಸುವ ಭಾರತದ ಪ್ರಯತ್ನಕ್ಕೆ ಐತಿಹಾಸಿಕ ಯಶಸ್ಸು ಸಿಕ್ಕಿದೆ. ಶೇ. 100 ರಷ್ಟು ಭಾರತೀಯ ಕಚ್ಚಾವಸ್ತು ಹಾಗೂ ಸ್ವದೇಶಿ ಬಿಡಿಭಾಗಗಳಿಂದಲೇ ನಿರ್ಮಿಸಲಾದ ಅತ್ಯಾಧುನಿಕ ಎಕೆ-203 ಅಸಾಲ್ಟ್ ರೈಫಲ್‌ನ ಮೊದಲ ಆವೃತ್ತಿಯ ಫೈರಿಂಗ್ ಪರೀಕ್ಷೆ ಯಶಸ್ವಿಯಾಗಿ ಪೂರ್ಣಗೊಂಡಿದೆ.

ಉತ್ತರ ಪ್ರದೇಶದ ಅಮೇಥಿಯಲ್ಲಿರುವ ಕೋರ್ವಾ ಆರ್ಡನೆನ್ಸ್ ಕಾರ್ಖಾನೆಯಲ್ಲಿ ಇಂಡೋ-ರಷ್ಯನ್ ರೈಫಲ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು ಮೇಕ್ ಇನ್ ಇಂಡಿಯಾ ಯೋಜನೆಯಡಿ ಈ ರೈಫಲ್ ಅನ್ನು ಸಂಪೂರ್ಣವಾಗಿ

4ನೇ ಪುಟಕ್ಕೆ...

## ಕಾಂಗ್ರೆಸ್ ಎದುರಿಸಲು ವಿಪಕ್ಷಗಳಿಗೆ ಶಕ್ತಿ ಇಲ್ಲ:

# ಸಿಎಂ ಡಿಕೆಶಿ ಆಕ್ರೋಶ



ಬೆಂಗಳೂರು: ಸದನದಲ್ಲಿ ಕಾಂಗ್ರೆಸ್ ಎದುರಿಸಲು ಪ್ರತಿಪಕ್ಷಗಳಿಗೆ ಶಕ್ತಿ ಇಲ್ಲ. ಸಚಿವ ನಾಗೇಂದ್ರ ಏಕೆ ರಾಜೀನಾಮೆ ಕೊಡಬೇಕು ಎಂಬುದರ ಬಗ್ಗೆ ನೋಟಿಸ್ ಕೊಟ್ಟು ಚರ್ಚಿಸಬೇಕು. ಅನಗತ್ಯವಾಗಿ ಸದನವನ್ನು ಹಾಳು ಮಾಡುತ್ತಿದ್ದಾರೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕಾನೂನು ಚೌಕಟ್ಟಿನಲ್ಲಿ ಅವರು ಏನು ಬೇಕಾದರೂ ಮಾಡಬಹುದು. ಆದರೆ, ಬಿಜೆಪಿಯವರು ಗೂಂಡಾಗಿರಿ ಮಾಡುತ್ತಿದ್ದಾರೆ. ಧರಣಿ, ಹೋರಾಟ ಮಾಡುವುದು ತಪ್ಪಿಲ್ಲ. ಆದರೆ, ನಾಗೇಂದ್ರ ಏಕೆ ರಾಜೀನಾಮೆ ಕೊಡಬೇಕು ಎಂಬುದರ ಬಗ್ಗೆ ನೋಟಿಸ್ ಕೊಟ್ಟು ಚರ್ಚಿಸದೆ ಅಧಿವೇಶನವನ್ನು ಸುಖಾಸುಮ್ಮನೆ ಹಾಳು ಮಾಡುತ್ತಿದ್ದಾರೆ. ವಿರೋಧ ಪಕ್ಷಗಳ ಶಾಸಕರಿಗೆ ಇದನ್ನು ಕೇಳಲು ತಾಳ್ಮೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇಲ್ಲಿಯವರೆಗೆ ದೇಶದ ಯಾವ್ಯಾವ ಮುಖ್ಯಮಂತ್ರಿಗಳು, ಕೇಂದ್ರ ಮಂತ್ರಿಗಳು ಮತ್ತು ಸಚಿವರ ಮೇಲೆ ಕೇಸ್‌ಗಳಿವೆ

2ನೇ ಪುಟಕ್ಕೆ...

## ರಾಜೀನಾಮೆಗೆ ಆಗ್ರಹಿಸಿ ಇಂದು ವಿಧಾನಸೌಧ ಮುತ್ತಿಗೆ: ಆರ್. ಅಶೋಕ್


ಬೆಂಗಳೂರು: ವಾಲ್ಮೀಕಿ ನಿಗಮದ ಹಣ ದುರ್ಬಳಕೆ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ನಾಳೆ ಬಿಜೆಪಿ ವತಿಯಿಂದ ವಿಧಾನಸೌಧ ಮುತ್ತಿಗೆ ಹಾಕಲಾಗುವುದು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದ್ದಾರೆ. ಮಲ್ಲೇಶ್ವರದ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬೆಳಗ್ಗೆ 9:30ಕ್ಕೆ ಸ್ವಾತಂತ್ರ್ಯ ಉದ್ಯಾನದಿಂದ ಪ್ರತಿಭಟನೆ ಆರಂಭವಾಗಲಿದೆ.

2ನೇ ಪುಟಕ್ಕೆ...



## ಒಡಿಶಾ ಕರಾವಳಿಯಲ್ಲಿ ಹಡಗು ಮುಳುಗಡೆ

# ಇಬ್ಬರ ರಕ್ಷಣೆ, 22 ಮಂದಿ ನಾಪತ್ತೆ



ಭುವನೇಶ್ವರ: ಒಡಿಶಾದ ಪ್ಯಾರದೀಪ್ ಕರಾವಳಿಯಿಂದ ಸುಮಾರು 240 ನಾಟಿಕಲ್ ಮೈಲು (444 ಕಿಮೀ) ದೂರದಲ್ಲಿರುವ ಬಂಗಾಳ ಕೊಲ್ಲಿಯಲ್ಲಿ ಪನಾಮ ಧ್ವಜ ಹೊತ್ತ ಹಡಗು

4ನೇ ಪುಟಕ್ಕೆ...

## ತುಂಗಭದ್ರಾ ನದಿಯಲ್ಲಿ ನೀರಿದ್ದರೆ ಕೆರೆಗಳು ತುಂಬಲಿವೆ:

## ರೈತರು ವಿಶಾಲ ಮನೋಭಾವದಿಂದ ಸಹಕರಿಸಬೇಕು




ದಾವಣಗೆರೆ: ತುಂಗಭದ್ರಾ ನದಿಯಲ್ಲಿ ನೀರು ಸಮರ್ಪಕವಾಗಿ ಹರಿದರೆ ಈ ಭಾಗದ ಕೆರೆಗಳನ್ನು ತುಂಬಿಸಲು ಸಾಧ್ಯವಾಗಲಿದ್ದು, ರೈತರು ಹಾಗೂ ಸಾರ್ವಜನಿಕರು ನೀರಾವರಿ ಯೋಜನೆಗೆ ಸಹಕರಿಸುವ ಮೂಲಕ ನೀರನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಿರಿಗೆರೆ ತರಳಬಾಳು ಜಗದ್ಗುರು ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಕರೆ ನೀಡಿದರು.

ತಾಲೂಕಿನ ಕಂದನಕೋವಿ ಗ್ರಾಮದಲ್ಲಿ ಭಾನುವಾರ ಶ್ರೀಈಶ್ವರ, ಬಸವೇಶ್ವರ ದೇವಸ್ಥಾನ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ನೀರಿನ ಮಹತ್ವವನ್ನು ಅರಿತು ಪ್ರತಿಯೊಬ್ಬರೂ ನೀರು ಪೋಲಾಗದಂತೆ ಎಚ್ಚರ ವಹಿಸಬೇಕು. ನಮ್ಮ ಊರಿಗೆ ನೀರು ಸಿಗುವುದರ ಜೊತೆಗೆ ನೆರೆಹೊರೆಯ ಗ್ರಾಮಗಳಿಗೂ ನೀರು ತಲುಪಬೇಕು ಎಂಬ ವಿಶಾಲ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಲಭ್ಯವಿರುವ ನೀರನ್ನು ತಡೆಯುವುದು ಅಥವಾ ಯೋಜನೆಗೆ ಅಡ್ಡಿಪಡಿಸುವುದು ಸೂಕ್ತವಲ್ಲ ಎಂದು ಅವರು ಕಿವಿಮಾತು ಹೇಳಿದರು.

ನೀರಾವರಿ ಯೋಜನೆಯಡಿ ಪೈಪ್‌ಲೈನ್ ಸೋರಿಕೆ, ಮೋಟಾರ್‌ಗಳ ದುರಸ್ತಿ ಹಾಗೂ ಹಳೆಯ ಯಂತ್ರೋಪಕರಣಗಳ ಸಮಸ್ಯೆಗಳು

2ನೇ ಪುಟಕ್ಕೆ....

## ಲಿಂಗಾಯತ ವೀರಶೈವ ಸಮಾಜ ಒಡೆಯುತ್ತಿರುವ ರಾಜಕಾರಣಿಗಳು

### ಫಕೀರೇಶ್ವರ ಸಂಸ್ಥಾನ ಮಠದ ದಿಂಗಾಲೇಶ್ವರ ಸ್ವಾಮೀಜಿ ಬೇಸರ



ಧಾರವಾಡ: ಲಿಂಗಾಯತ ಮತ್ತು ವೀರಶೈವ ಎರಡೂ ಒಂದೇ ಆಗಿದ್ದು, ಸಮಾಜದಲ್ಲಿ ಒಡಕು ಮೂಡಿಸುವ ರಾಜಕಾರಣಿಗಳ ಪ್ರಯತ್ನ ದುರದೃಷ್ಟಕರ ಎಂದು ಶಿರಹಟ್ಟಿ ಫಕೀರೇಶ್ವರ ಸಂಸ್ಥಾನ ಮಠದ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

**ಲಿಂಗಾಯತ-ವೀರಶೈವ ಎರಡೂ ಒಂದೇ ಸಮಾಜ ಸಮಾಜದಲ್ಲಿ ಒಡಕು ಮೂಡಿಸುವ ಪ್ರಯತ್ನ ಸಲ್ಲದು.**

ಧಾರವಾಡದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜವನ್ನು ಒಗ್ಗೂಡಿಸುವ ಉದ್ದೇಶದಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾವನ್ನು ಸ್ಥಾಪಿಸಿ ಸಂಘಟನೆಯ ಬಲವರ್ಧನೆಗೆ ಶ್ರಮಿಸಿದ ತ್ಯಾಗವೀರ ಶಿರಸಂಗಿ ಲಿಂಗರಾಜ ದೇಸಾಯಿ ಅವರ ಕೊಡುಗೆಯನ್ನು ಸ್ಮರಿಸಿದರು.

ಲಿಂಗರಾಜ ದೇಸಾಯಿ ಅವರು ನಿಸ್ವಾರ್ಥ ಮನೋಭಾವದಿಂದ ತಮ್ಮ ಅಪಾರ ಸಂಪತ್ತನ್ನು ಸಮಾಜದ ಅಭಿವೃದ್ಧಿಗೆ ದಾನ ಮಾಡಿದ ಮಹಾನ್ ತ್ಯಾಗಿಯಾಗಿದ್ದರು. ಕರ್ಣನಿಗಿಂತಲೂ

2ನೇ ಪುಟಕ್ಕೆ...

# ಗಣಿನಾಡಿನಲ್ಲೂ ಅನಧಿಕೃತವಾಗಿ ಔಷಧ ಸಂಗ್ರಹ



ಬಳ್ಳಾರಿ : ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನಕಲಿ ಔಷಧಿ ಜಾಲ ಪತ್ತೆಯಾದ ಬೆನ್ನಲ್ಲೆ ಗಣಿನಾಡು ಬಳ್ಳಾರಿಯಲ್ಲೂ ಲೈಸೆನ್ಸ್ ಇಲ್ಲದೇ ಔಷಧ ಸಂಗ್ರಹ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ. ಲೈಸೆನ್ಸ್ ಇಲ್ಲದೆ ಔಷಧ ಸಂಗ್ರಹ ಹಾಗೂ ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಔಷಧ ನಿಯಂತ್ರಣ ಇಲಾಖೆಯ ಅಧಿಕಾರಿ ಮಂಜುಳ ನೇತೃತ್ವದಲ್ಲಿ ಬಳ್ಳಾರಿ ನಗರದ ಮೋತಿ ಸರ್ಕಲ್ ಬಳಿಯ ಶ್ರೀ ಮಹಾವೀರ ಮೆಡಿಕಲ್ ಏಜೆನ್ಸಿ ಮೇಲೆ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ಕೈಗೊಂಡಿದ್ದಾರೆ. ಔಷಧಗಳ ಸಂಗ್ರಹ ಹಾಗೂ ಮಾರಾಟಕ್ಕೆ ಅಗತ್ಯವಿರುವ ಲೈಸೆನ್ಸ್ ಮತ್ತು ದಾಖಲೆಗಳು ಇಲ್ಲದೆ ಮೆಡಿಕಲ್ ಏಜೆನ್ಸಿ ಕಾರ್ಯನಿರ್ವಹಿಸುತ್ತಿದೆ ಎಂಬ ಮಾಹಿತಿ ಇತ್ತು. ಅಧಿಕಾರಿಗಳು ದಿಢೀರ್ ದಾಳಿ ಮಾಡಿದ್ದು, ಪರಿಶೀಲನೆ ವೇಳೆ ಆಯುರ್ವೇದಿಕ್ ಉತ್ಪನ್ನಗಳು, ಫುಡ್ ಪ್ರಾಡಕ್ಟ್ ಸೇರಿದಂತೆ ವಿವಿಧ ಮೆಡಿಕಲ್ ಉತ್ಪನ್ನಗಳನ್ನು ಸಂಗ್ರಹಿಸಿಟ್ಟಿರುವುದು ಬೆಳಕಿಗೆ ಬಂದಿದೆ. ಏಜೆನ್ಸಿ ಮಾಲೀಕ ಮಹಾವೀರ್ ಎಂದು ತಿಳಿದು ಬಂದಿದೆ. ದಾಳಿ ವೇಳೆ ಅಗತ್ಯ ಪರವಾನಗಿ ಇಲ್ಲದಿರುವುದು ಕಂಡುಬಂದಿದೆ ಎನ್ನಲಾಗಿದ್ದು, ಸ್ಥಳದಲ್ಲಿದ್ದ ಔಷಧ ಹಾಗೂ ಇತರೆ ವಸ್ತುಗಳನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಇಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಅಜಿತ್ ದೋವಲ್ ಇಂದು ಚೀನಾ ಭೇಟಿ;

## ಭಾರತ-ಚೀನಾ ಗಡಿ ಸಮಸ್ಯೆ ಕುರಿತು ಮಹತ್ವದ ಮಾತುಕತೆ



ನವದೆಹಲಿ: ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ಇಂದು ಚೀನಾದ ರಾಜಧಾನಿ ಬೀಜಿಂಗ್‌ಗೆ ಭೇಟಿ ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಚೀನಾದ ವಾಂಗ್ ಯೀ ಅವರೊಂದಿಗೆ ಭಾರತ – ಚೀನಾ ಗಡಿ ಸಮಸ್ಯೆಗಳ ಕುರಿತು ವಿಶೇಷ ಪ್ರತಿನಿಧಿಗಳ ಮಾತುಕತೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಉಭಯ ದೇಶಗಳು ಮಂಗಳವಾರ 25ನೇ ಸುತ್ತಿನ ಮಾತುಕತೆ ನಡೆಸಲಿವೆ. ಮುಂಬರುವ ಸೆಪ್ಟೆಂಬರ್ 12-13 ರಂದು ದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಗಾಗಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಅದಕ್ಕೂ ಮುನ್ನವೇ ಗಡಿ ಸಮಸ್ಯೆ ಕುರಿತು ನಡೆಯಲಿರುವ ಮಾತುಕತೆ ಮಹತ್ವದ್ದಾಗಿವೆ. ಜಿನ್‌ಪಿಂಗ್ ಭೇಟಿಯ ಬಗ್ಗೆ ಇನ್ನೂ ಅಧಿಕೃತ ದೃಢೀಕರಣವಿಲ್ಲದಿದ್ದರೂ, ವಿಶೇಷ ಪ್ರತಿನಿಧಿಗಳ ಮಾತುಕತೆ ಮೇಲೆ ಹೆಚ್ಚಿನ ನಿಗಾ ಇಡಲಾಗಿದೆ.

ಭಾರತ ಮತ್ತು ಚೀನಾ ವಾಸ್ತವ ನಿಯಂತ್ರಣ ರೇಖೆಯ ಉದ್ದಕ್ಕೂ ಉದ್ವಿಗ್ನತೆ ಕಡಿಮೆ ಮಾಡಲು ಮತ್ತು ಮಿಲಿಟರಿ ಮುಖಾಮುಖಿ ಕಡಿಮೆ ಮಾಡಲು ನಿರಂತರ ಪ್ರಯತ್ನಗಳು ನಡೆಯುತ್ತಲೇ ಇವೆ. 2020ರ ಜೂನ್‌ನಲ್ಲಿ ನಡೆದ ಗಾಲ್ವಾನ್ ಘರ್ಷಣೆಯ ನಂತರ ಉಭಯ ದೇಶಗಳ ನಡುವಿನ ಸಂಬಂಧಗಳು ಹದಗೆಟ್ಟಿದ್ದವು. ಆಗಿನಿಂದಲೂ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚುತ್ತಲೇ ಇದೆ.

ಸದ್ಯ ಪೂರ್ವ ಲಡಾಖ್‌ನಲ್ಲಿ ಭಾರತ ಮತ್ತು ಚೀನಾ ಹೆಚ್ಚಿನ ಸಂಖ್ಯೆಯ ಸೈನಿಕರು ಮತ್ತು ಮಿಲಿಟರಿ ಸೌಲಭ್ಯಗಳನ್ನ ನಿಯೋಜನೆ ಮಾಡಿವೆ. ಈ ಎಲ್ಲ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ವಿಶೇಷ ಪ್ರತಿನಿಧಿಗಳ ಮಾತುಕತೆ ಅತ್ಯಂತ ಮಹತ್ವದ್ದಾಗಿದೆ

## ಭದ್ರಾ ನಾಲೆಗೆ ನೀರು: ಇಂದು ದಾವಣಗೆರೆ ಬಂದ್

ದಾವಣಗೆರೆ: ಭದ್ರಾ ನಾಲೆಗೆ ತಕ್ಷಣವೇ ನೀರು ಬಿಡುಗಡೆ ಮಾಡಲು ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದನ್ನು ಖಂಡಿಸಿ ಆಗಸ್ಟ್ 24ರಂದು ಬೆಳಿಗ್ಗೆ 8 ಗಂಟೆಯಿಂದ ಸಂಪೂರ್ಣ ದಾವಣಗೆರೆ ಬಂದ್‌ಗೆ ಭಾರತೀಯ ರೈತ ಒಕ್ಕೂಟ ದಾವಣಗೆರೆ ಜಿಲ್ಲಾ ಘಟಕ ಕರೆ ನೀಡಿದೆ.

ಕುಡಿಯುವ ನೀರು ಹಾಗೂ ರೈತರ ಬೆಳೆಗಳಿಗೆ ತಕ್ಷಣವೇ ನೀರು ಪೂರೈಸಬೇಕೆಂಬ ಪ್ರಮುಖ ಬೇಡಿಕೆಗೆ ಆಗ್ರಹಿಸಿ, ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಅವರ ನೇತೃತ್ವದಲ್ಲಿ ಬಂದ್ ಗೆ ಕರೆ ನೀಡಿದ್ದು, ನಗರದ ಸಾರ್ವಜನಿಕರು, ವರ್ತಕರು, ದಲ್ಲಾಳರು, ಜವಳಿ ಅಂಗಡಿ ಮಾಲೀಕರು, ಚಿನ್ನಾಭರಣ ವ್ಯಾಪಾರಿಗಳು, ಹೋಟೆಲ್ ಮಾಲೀಕರು, ಮಿಲ್ ಮಾಲೀಕರು, ಕೂಲಿ ಕಾರ್ಮಿಕರು, ಕಿರಾಣಿ ವರ್ತಕರು, ಆಟೋ ಮಾಲೀಕರು ಮತ್ತು ಚಾಲಕರು,

4ನೇ ಪುಟಕ್ಕೆ...

ಒಂದನೇ ಪುಟದಿಂದ..

# ತುಂಗಭದ್ರಾ ನದಿಯಲ್ಲಿ ನೀರಿದ್ದರೆ ಕೆರೆಗಳು ತುಂಬಲಿವೆ: ರೈತರು ವಿಶಾಲ ಮನೋಭಾವದಿಂದ ಸಹಕರಿಸಬೇಕು

ಎದುರಾಗಿವೆ. ಹೊಸ ಪೈಪ್‌ಲೈನ್‌ಗಳು ಮತ್ತು ಮೋಟಾರ್‌ಗಳನ್ನು ಅಳವಡಿಸುವುದು ಸೇರಿದಂತೆ ಅಗತ್ಯ ದುರಸ್ತಿ ಕಾರ್ಯಗಳಿಗೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ. ಜಿಲ್ಲಾ ಸಚಿವರ ಪ್ರಯತ್ನದಿಂದ ಯೋಜನೆ ಹಾಗೂ ದುರಸ್ತಿ ಕಾರ್ಯಗಳಿಗೆ ಸುಮಾರು 75 ಕೋಟಿ ಅನುದಾನ ಮಂಜೂರಾಗಿದ್ದು, ಇದನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದರು. ತುಪ್ಪದಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಕೆರೆಗಳನ್ನು ನೀರಾವರಿ ಯೋಜನೆಯಡಿ ಸೇರಿಸಿ ನೀರು ತುಂಬಿಸುವ ಕಾರ್ಯ ನಡೆಯುತ್ತಿದೆ. ಕನಿಷ್ಠ ಒಂದು ಮೋಟಾರ್‌ನಿಂದ ನೀರು ಹರಿದರೂ ಕೆಲವು ಕೆರೆಗಳು ತುಂಬಿ, ಅಂತರ್ಜಲ ವೃದ್ಧಿಗೆ ಸಹಕಾರಿಯಾಗಲಿದೆ. ಇದರಿಂದ ಸುತ್ತಮುತ್ತಲಿನ ಪ್ರದೇಶಗಳಿಗೂ ನೀರಿನ ಲಭ್ಯತೆ ಹೆಚ್ಚಾಗಲಿದೆ ಎಂದು ತಿಳಿಸಿದರು.

ಕೆರೆಗಳಿಗೆ ನೀರು ಹರಿಸುವ ವಿಚಾರದಲ್ಲಿ ಪ್ರತಿಭಟನೆ, ಧರಣಿ ನಡೆಸುವುದಕ್ಕಿಂತ ಸಂಬಂಧಪಟ್ಟ ಎಂಜಿನಿಯರ್‌ಗಳು ಹಾಗೂ ತಜ್ಞರಿಗೆ ಸಮಸ್ಯೆಯನ್ನು ಮನವರಿಕೆ ಮಾಡಿ ಪರಿಹಾರ ಕಂಡುಕೊಳ್ಳುವುದು ಸೂಕ್ತ. ಯಾವ ಕೆರೆಗೆ ನೀರು ಬರುತ್ತಿದೆ, ಯಾವ ಕೆರೆಗೆ ಬರುತ್ತಿಲ್ಲ ಎಂಬುದನ್ನು ಪರಿಶೀಲಿಸಿ ಅಧಿಕಾರಿಗಳ ಗಮನಕ್ಕೆ ತರಬೇಕು. ಅಗತ್ಯವಿದ್ದರೆ ಕೆರೆಗಳ ಸ್ಥಿತಿಗತಿಯ 15 ಸೆಕೆಂಡ್‌ಗಳ ವಿಡಿಯೋ ಮಾಡಿ ಸಂಬಂಧಪಟ್ಟ ವಾಟ್ಸಾಪ್ ಗುಂಪುಗಳಿಗೆ ಹಂಚಿಕೊಳ್ಳಬಹುದು ಎಂದು ಸಲಹೆ ನೀಡಿದರು.

ಮಳೆ ಬರಲಿ, ಬಾರದಿರಲಿ ತುಂಗಭದ್ರಾ ನದಿಯಲ್ಲಿ ನೀರು ಸಮೃದ್ಧವಾಗಿ ಹರಿಯಲಿ ಎಂದು ದೇವರಲ್ಲಿ ಪ್ರಾರ್ಥಿಸಬೇಕು. ನದಿಯಲ್ಲಿ ನೀರಿದ್ದರೆ ಈ ಭಾಗದ ಕೆರೆಗಳು ತುಂಬಿ, ರೈತರು ನೆಮ್ಮದಿಯಿಂದ ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ರೈತರು ಹಠಮಾರಿತನ ಬಿಟ್ಟು, ಲಭ್ಯವಿರುವ ನೀರನ್ನು ಸದುಪಯೋಗಪಡಿಸಿಕೊಳ್ಳಲು ಸಹಕರಿಸಬೇಕು ಎಂದು ಜಗದ್ಗುರುಗಳು ಮನವಿ ಮಾಡಿದರು.

ಬಸವಣ್ಣನವರ ವಚನಗಳು ಹಾಗೂ ದ್ರೌಪದಿಯ ಶರಣಾಗತಿಯ ಉದಾಹರಣೆಗಳನ್ನು ಉಲ್ಲೇಖಿಸಿದ ಅವರು, ಭಕ್ತಿ ಎಂದರೆ ಸಂಪೂರ್ಣ ಸಮರ್ಪಣಾ ಭಾವ ಮತ್ತು ಪರಸ್ಪರ ನಂಬಿಕೆಯಾಗಿದೆ. ನಮ್ಮ ಪಾಲಿಗೆ ಮಾತ್ರ ನೀರು ಬೇಕೆಂಬ ಮನೋಭಾವಕ್ಕಿಂತ, ನಮಗೆ ಸಿಗದಿದ್ದರೂ ಪಕ್ಕದ ಗ್ರಾಮಸ್ಥರಿಗೆ ನೀರು ಸಿಗಲಿ ಎನ್ನುವ ವಿಶಾಲ ಮನೋಭಾವವೇ ನಿಜವಾದ ಮಾನವೀಯತೆ ಎಂದು ಹೇಳಿದರು.

ಗ್ರಾಮಸ್ಥರ ಶ್ರಮ ಮತ್ತು ಭಕ್ತಿಯಿಂದ ನಿರ್ಮಾಣಗೊಂಡಿರುವ ದೇವಸ್ಥಾನಗಳ ಅಭಿವೃದ್ಧಿಯನ್ನೂ ಶ್ಲಾಘಿಸಿದ ಅವರು, ಯಾವುದೇ ಅಡೆತಡೆಗಳು ಎದುರಾದರೂ ಭಕ್ತಿ ಮತ್ತು ಒಗ್ಗಟ್ಟಿನಲ್ಲಿ ಕೊರತೆಯಾಗಬಾರದು. ನೀರಾವರಿ ಯೋಜನೆ ಯಶಸ್ವಿಯಾಗಲು ಜನರು, ರೈತರು ಮತ್ತು ಅಧಿಕಾರಿಗಳು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಕೆ.ಎಸ್. ಬಸವಂತಪ್ಪ ಮಾತನಾಡಿ, ಕಳೆದ 30–35 ವರ್ಷಗಳಿಂದ ಕ್ಷೇತ್ರದ ಜನರೊಂದಿಗೆ ನಿಕಟ ಬಾಂಧವ್ಯ ಹೊಂದಿದ್ದು, ಮನೆಯ ಮಗನಂತೆ ಸೇವೆ ಸಲ್ಲಿಸುತ್ತಿದ್ದೇನೆ. ಜಿಲ್ಲಾ ಪಂಚಾಯತ್ ಸದಸ್ಯನಾಗಿ, ಶಾಸಕನಾಗಿ ಹಾಗೂ ಇದೀಗ ಸಚಿವನಾಗಿ ಜನರ ಸೇವೆ ಮಾಡುವ ಅವಕಾಶ ದೊರೆತಿರುವುದು ನನ್ನ ಭಾಗ್ಯ ಎಂದು ಅವರು ಸ್ಮರಿಸಿದರು.

ರೈತರ ಹಿತದೃಷ್ಟಿಯಿಂದ ಶ್ರೀಗಳ ಕನಸಿನ 22 ಕೆರೆ ತುಂಬಿಸುವ ಯೋಜನೆ'ಯನ್ನು ಜಾರಿಗೊಳಿಸಲು ಸರ್ಕಾರ ಬದ್ಧವಾಗಿದೆ. ಹಿಂದೆ ಅನುದಾನದ ಕೊರತೆ ಹಾಗೂ ಕಾಮಗಾರಿ ವಿಳಂಬದಿಂದ ರೈತರಿಗೆ ತೊಂದರೆಯಾಗಿತ್ತು. ಇದೀಗ ಜಿಲ್ಲಾ ಉಸ್ತುವಾರಿ ಸಚಿವ ಮಲ್ಲಣ್ಣ ಅವರೊಂದಿಗೆ ಸಮನ್ವಯದಿಂದ ಈಗಾಗಲೇ ಬಿಡುಗಡೆಯಾಗಿರುವ 18 ಕೋಟಿ ಮೊತ್ತದ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ, ಉಳಿದ 75 ಕೋಟಿ ವೆಚ್ಚದ ಕಾಮಗಾರಿಗಳಿಗೂ ಶೀಘ್ರ ಟೆಂಡರ್ ಕರೆದು ಗುದ್ದಲಿ ಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಮುಜರಾಯಿ ಸಚಿವನಾಗಿ ಕ್ಷೇತ್ರದ ಹಾಗೂ ರಾಜ್ಯದ ವಿವಿಧ ದೇವಾಲಯಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೆ ಅಗತ್ಯ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು. ದೇವಸ್ಥಾನ ನಿರ್ಮಾಣದಷ್ಟೇ ಅದರ ಸ್ವಚ್ಛತೆ, ಪಾವಿತ್ರ್ಯ ಹಾಗೂ ಸದ್ಬಳಕೆಯನ್ನು ಕಾಪಾಡುವುದು ಕೂಡ ಗ್ರಾಮಸ್ಥರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಎಸ್. ಕೆ .ಚಂದ್ರಶೇಖರ್, ಶಾಮ್, ಶಿವಕುಮಾರ್ ಸ್ವಾಮಿ, ಹಾಗೂ ಈಶ್ವರ ದೇವಸ್ಥಾನ ಸಮಿತಿ ಸದಸ್ಯರು, ಕಂದನಕೋವಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸಂಪೂರ್ಣ ಸ್ವದೇಶಿ ನಿರ್ಮಿತ ಮೊದಲ ಎಕೆ–203 ರೈಫಲ್ ಪರೀಕ್ಷೆ ಯಶಸಿ

–1ನೇ ಪುಟದಿಂಧ..\

ದೇಶಿಯವಾಗಿ ಸಿದ್ಧಪಡಿಸಿದೆ. ಈ ಸ್ವದೇಶಿ ಮಾದರಿಯ ರೈಫಲ್‌ಗೆ 'ಶೇರ್' ಎಂದು ಹೆಸರಿಸಲಾಗಿದೆ.

ರೈಫಲ್‌ಗೆ ಬಳಸಲಾದ ಪ್ರತಿಯೊಂದು ಬಿಡಿಭಾಗ ಹಾಗೂ ಕಚ್ಚಾ ಸಾಮಗ್ರಿಯನ್ನು ಭಾರತೀಯ ಉದ್ಯಮಗಳಿಂದಲೇ ಸಂಗ್ರಹಿಸಲಾಗಿದೆ. ಇದು ಗ್ಯಾಸ್ ಆಧಾರಿತ 7.6239 ಮಿಮೀ ಸಾಮರ್ಥ್ಯದ ಅಸಾಲ್ಟ್ ರೈಫಲ್ ಆಗಿದ್ದು, ನಿಮಿಷಕ್ಕೆ 700 ಸುತ್ತು ಗುಂಡು ಹಾರಿಸುವ ಹಾಗೂ 800 ಮೀಟರ್ ವರೆಗಿನ ಗುರಿಯನ್ನು ನಿಖರವಾಗಿ ಹೊಡೆದುರುಳಿಸುವ ಸಾಮರ್ಥ್ಯ ಹೊಂದಿದೆ. ಶೀಘ್ರದಲ್ಲೇ ಪ್ರತಿ 100 ಸೆಕೆಂಡಿಗೆ ಒಂದು ಎಕೆ–203 ರೈಫಲ್ ತಯಾರಿಸುವ ಬೃಹತ್ ಉತ್ಪಾದನಾ ಗುರಿಯನ್ನು ಸಂಸ್ಥೆ ಹಾಕಿಕೊಂಡಿದೆ. ಭಾರತೀಯ ಸೇನೆಯು ಪ್ರಸ್ತುತ ಬಳಸುತ್ತಿರುವ ಹಳೆಯ 'ಇನ್ಸಾಸ್' ರೈಫಲ್‌ಗಳ ಬದಲಿಗೆ ಹಂತ–ಹಂತವಾಗಿ 6 ಲಕ್ಷಕ್ಕೂ ಅಧಿಕ ಎಕೆ–203 ರೈಫಲ್‌ಗಳನ್ನು ಸೇನೆಗೆ ಸೇರ್ಪಡೆಗೊಳಿಸಲಾಗುತ್ತಿದೆ. ಸಂಪೂರ್ಣ ಭಾರತೀಯ ಮಾದರಿಯ (ಪ್ರೋಟೋಟೈಪ್) ರೈಫಲ್‌ಗಳು ಸೆಪ್ಟೆಂಬರ್ 2026ರ ವೇಳೆಗೆ ಸೇನಾ ಪರೀಕ್ಷಾರ್ಥ ಪ್ರಯೋಗಗಳಿಗೆ ಹಸ್ತಾಂತರಗೊಳ್ಳಲಿವೆ ಎಂದು ಸಂಸ್ಥೆಯ ಸಿಇಒ ಮತ್ತು ಎಂಡಿ ಮೇಜರ್ ಜನರಲ್ ಎಸ್.ಕೆ. ಶರ್ಮಾ ತಿಳಿಸಿದ್ದಾರೆ. ಉತ್ಪಾದನಾ ವೇಗ ಹೆಚ್ಚಿರುವುದರಿಂದ ಸೇನೆಗೆ ನಿಗದಿತ ಅವಧಿಗಿಂತ ಸುಮಾರು ಒಂದು ವರ್ಷ ಮುಂಚಿತವಾಗಿಯೇ ಪೂರ್ಣ ಪ್ರಮಾಣದ ರೈಫಲ್‌ಗಳನ್ನು ತಲುಪಿಸಲು ಸಿದ್ಧತೆಗಳು ನಡೆದಿವೆ. ಭಾರತೀಯ ಸೇನೆಗೆ ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ಒದಗಿಸುವ ಸಲುವಾಗಿ ಉತ್ತರ ಪ್ರದೇಶದ ಅಮೇಠಿ ಜಿಲ್ಲೆಯ ಕೊರ್ವಾ ಎಂಬಲ್ಲಿ ರೈಫಲ್ ತಯಾರಿಸುವ ಕಾರ್ಖಾನೆಯನ್ನು ಸ್ಥಾಪಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು 2019ರ ಮಾರ್ಚ್ 3 ರಂದು ಈ ಫ್ಯಾಕ್ಟರಿ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು. ಭಾರತದ ಅಡ್ವಾನ್ಸ್ಡ್ ವೆಪನ್ಸ್ ಅಂಡ್ ಇಕ್ವಿಪ್ಮೆಂಟ್ ಇಂಡಿಯಾ ಲಿಮಿಟೆ–ಡ್ ಮತ್ತು ಮ್ಯುನಿಷನ್ಸ್ ಇಂಡಿಯಾ ಲಿಮಿಟೆಡ್ ಶೇ. 50.5 ಪಾಲವನ್ನು ಹೊಂದಿದ್ದರೆ ರಷ್ಯಾದ ರೊಸೊಬೊರೊನೆಕ್ಸ್ಪೋರ್ಟ್ ಮತ್ತು ಕಲಾಶ್ನಿಕೋವ್ ಸಂಸ್ಥೆಗಳು ಶೇ.49.5 ಪಾಲನ್ನು ಹೊಂದಿವೆ.

ಭಾರತೀಯ ರಕ್ಷಣಾ ಸಚಿವಾಲಯವು ಒಟ್ಟು 6 ಲಕ್ಷಕ್ಕೂ ಅಧಿಕ ರೈಫಲ್‌ಗಳ ಪೂರೈಕೆಗಾಗಿ ಐಆರ್‌ಆರ್‌ಪಿಎಲ್ ಜೊತೆ ಒಪ್ಪಂದ ಮಾಡಿಕೊಂಡಿತ್ತು.

# ಮೂರೇ ವರ್ಷದಲ್ಲಿ 13,085 ಪೋಕ್ಸೋ ಕೇಸ್ ದಾಖಲು



ಬೆಂಗಳೂರು: ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಪೋಕ್ಸೋ ಪ್ರಕರಣ ಶೇ. 30ರಷ್ಟು ಹೆಚ್ಚಾಗಿದೆ. 2023ರಿಂದ ವರ್ಷದಿಂದ ವರ್ಷದಿಂದ ವರ್ಷಕ್ಕೆ ಪ್ರಕರಣಗಳು ಏರುತ್ತಿವೆ.

ಈ 3 ವರ್ಷದ ಅವಧಿಯಲ್ಲಿ ಒಟ್ಟು 13,085 ಪೋಕ್ಸೋ ಪ್ರಕರಣಗಳು ದಾಖಲಾಗಿವೆ.

2023ರಲ್ಲಿ 3247 ಪೋಕ್ಸೋ ಪ್ರಕರಣಗಳು ದಾಖಲಾಗಿದ್ದು, 2024ರಲ್ಲಿ 3317 ಪ್ರಕರಣ ದಾಖಲಾಗಿ ಶೇ.2ರಷ್ಟು ಏರಿಕಯಾಗಿವೆ. 2025ರಲ್ಲಿ ಅತೀ ಹೆಚ್ಚು 3907 ಕೇಸ್ ಆಗಿದ್ದು, ದಿನಕ್ಕೆ 10ಕ್ಕೂ ಹೆಚ್ಚು ಪ್ರಕರಣ ದಾಖಲಾಗಿವೆ. 2023ಕ್ಕೆ ಹೋಲಿಸಿದರೆ ಶೇ. 21ರಷ್ಟು ಪ್ರಕರಣಗಳು ಹೆಚ್ಚಳವಾಗಿವೆ. 2026ರ ಜೂನ್ ತಿಂಗಳಲ್ಲಿ 383 ಕೇಸ್ ಹಾಗೂ ಜುಲೈ ತಿಂಗಳಲ್ಲಿ 415 ಕೇಸ್ ಪತ್ತೆಯಾಗಿದ್ದು, ಒಂದೇ ತಿಂಗಳಲ್ಲಿ 32 ಪ್ರಕರಣ ದಾಖಲಾಗಿ ಶೇ. 8.3ರಷ್ಟು ಹೆಚ್ಚಳವಾಗಿವೆ. ಈ ವರ್ಷ ಒಟ್ಟು 2614 ಪ್ರಕರಣಗಳು ದಾಖಲಾಗಿವೆ.

ಪೋಕ್ಸೋ ಪ್ರಕರಣಗಳಲ್ಲಿ ಮರ್ಯಾದೆಗೆ ಹೆದರಿ ದೂರುಗಳೇ ಬರದಿದ್ದುದೇ ಹೆಚ್ಚು. ಇನ್ನು ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ರಾಜಿ, ಪಂಚಾಯತಿ ಮಾಡಿ ಕೇಸ್‌ನ್ನು ಗ್ರಾಮದ ಹಿರಿಯರು ಅಲ್ಲೇ ಮುಚ್ಚಿ ಹಾಕಿತ್ತಾರೆ.

ಹಲವು ಕಡೆ ವೈಯಕ್ತಿಕ ದ್ವೇಷದಿಂದ ಸುಳ್ಳು ಪ್ರಕರಣಗಳು ಸಹ ದಾಖಲಾಗುತ್ತವೆ.

2023ರ 3,247 ಕೇಸ್‌ಗಳಲ್ಲಿ 126 ಪ್ರಕರಣದ ಅಪರಾಧಿಗಳಿಗೆ ಹಾಗೂ 2024ರಲ್ಲಿ 3,317 ಕೇಸ್‌ಗಳಲ್ಲಿ 36 ಪ್ರಕರಣದ ಅಪರಾಧಿಗಳಿಗೆ ಶಿಕ್ಷೆಯಾಗಿದ್ದು ಉಳಿದ ಕೇಸ್ ತನಿಖೆ ಹಂತದಲ್ಲಿವೆ. 2025ರಲ್ಲಿ 3,907 ಕೇಸ್‌ಗಳಲ್ಲಿ 1,927 ಪ್ರಕರಣಗಳಿಗೆ ತೀರ್ಪು ನೀಡಲಾಗಿದೆ.

# ಕಾಂಗ್ರೆಸ್ ಎದುರಿಸಲು ವಿಪಕ್ಷಗಳಿಗೆ ಶಕ್ತಿ ಇಲ್ಲ: ಡಿಕೆಶಿ

ಎಂಬುದರ ಬಗ್ಗೆ ಅವರೇ ಹೇಳಲಿ. ಈ ದೇಶದಲ್ಲಿ ಸಾಕಷ್ಟು ಮಂತ್ರಿಗಳು ಮೇಲೆ ಕೇಸ್‌ಗಳಿವೆ. ಅವರು ರಾಜೀನಾಮೆ ಕೊಟ್ಟಿದ್ದಾರೆಯೇ ಎಂದು ಪ್ರಶ್ನಿಸಿದ ಸಿಎಂ, ನಮ್ಮ ಪಕ್ಷದಿಂದ ಅತಿ ಹೆಚ್ಚು ಶಾಸಕರು ಆಯ್ಕೆಯಾಗಿರುವುದನ್ನು ಬಿಜೆಪಿಗೆ ಸಹಿಸಿಕೊಳ್ಳುತ್ತಿಲ್ಲ ಎಂದರು.

ಅದಾನಿ ಭೇಟಿ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ನಾನು ಸಿಎಂ ಆದ ಬಳಿಕ ಮೊದಲ ಬಾರಿಗೆ ಗೌತಮ್ ಅದಾನಿ ಅವರು ಸೌಜನ್ಯದಿಂದ ಭೇಟಿ ಮಾಡಿದ್ದಾರೆ.ಕರ್ನಾಟಕದಲ್ಲಿ ಬೇಕಾದಷ್ಟು ಅವರು ವ್ಯವಹಾರ ನಡೆಸುತ್ತಿದ್ದಾರೆ ಎಂದರು.

# ಇಂದು ವಿಧಾನಸೌಧ ಮುತ್ತಿಗೆ: ಆರ್. ಅಶೋಕ್

ಕೇಂದ್ರಗಳಲ್ಲಿ ಹಗಲು–ರಾತ್ರಿ ಪ್ರತಿಭಟನೆಗಳು ನಡೆಯುತ್ತಿವೆ. ಈ ಹೋರಾಟವನ್ನು ಇಲ್ಲಿಗೆ ನಿಲ್ಲಿಸುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.

ಆ.25ರಂದು ವಿಧಾನಸೌಧ ಚಲೋಗೆ ನಿರ್ಧಾರ

ದಲಿತರ ಹಣ ದುರ್ಬಳಕೆಯಾಗಿದೆ ಎಂಬ ಆರೋಪವನ್ನು ರಾಜ್ಯದ ಜನರೂ ಖಂಡಿಸುತ್ತಿದ್ದಾರೆ. ಈ ವಿಚಾರದಲ್ಲಿ ಜನರು ಕೂಡ ಧ್ವನಿ ಎತ್ತಿರುವುದರಿಂದ ಇಡೀ ಸರ್ಕಾರವೇ ಇಕ್ಕಟ್ಟಿಗೆ ಸಿಲುಕಿದೆ ಎಂದು ಅವರು ಆರೋಪಿಸಿದರು.

ವಾಲ್ಮೀಕಿ ನಿಗಮದ 187 ಕೋಟಿ ರೂ. ಹಣವನ್ನು ದುರ್ಬಳಕೆ ಮಾಡಿ ಕರ್ನಾಟಕ ಮತ್ತು ತೆಲಂಗಾಣ ಚುನಾವಣೆಗೆ ಬಳಸಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ದಾಖಲೆಗಳನ್ನು ನೀಡಿದ್ದೇನೆ. ನಾವು ಹಗರಣವನ್ನು ಖಂಡಿಸಿ ಪ್ರತಿಭಟನೆ ನಡೆಸುತ್ತಿರುವುದರಿಂದ ಹೆದರಿರುವ ಆಡಳಿತ ಪಕ್ಷ ನಮ್ಮ ವಿರುದ್ಧವೇ ಪ್ರತಿಭಟನೆ ನಡೆಸುತ್ತಿದೆ. ಸತ್ಯವನ್ನು ಮುಚ್ಚಿಡಲು ಈ ರೀತಿಯ ಪ್ರತಿಭಟನೆ ಮಾಡಲಾಗುತ್ತಿದೆ ಎಂದು ಅಶೋಕ್ ಆರೋಪಿಸಿದರು.

ದಲಿತರ ಹಣ ದುರ್ಬಳಕೆ ಪ್ರಕರಣದ ಕುರಿತು ಸದನದಲ್ಲೂ ಹೋರಾಟ ಮುಂದುವರಿಯಲಿದೆ. ಪರಿಶಿಷ್ಟ ವರ್ಗದ ಹಣ ಸದ್ಬಳಕೆಯಾಗಬೇಕು. ಸಾರ್ವಜನಿಕ ಹೊಣೆಗಾರಿಕೆಯನ್ನು ಕಾಪಾಡುವುದು ನಮ್ಮ ಕರ್ತವ್ಯ. ಸಂವಿಧಾನದ ಮೌಲ್ಯಗಳನ್ನು ಉಳಿಸುವುದೇ ನಮ್ಮ ಉದ್ದೇಶ ಎಂದು ಹೇಳಿದರು.

ಕಾಂಗ್ರೆಸ್ ನಾಯಕರೇ, ನಿಮ್ಮ ನಿಷ್ಠೆ ಯಾರ ಪರ? ಪರಿಶಿಷ್ಟರ ಹಿತಾಸಕ್ತಿಯ ಪರವೋ, ಸಂವಿಧಾನದ ಆಶಯದ ಪರವೋ, ಜನರ ಪರವೋ ಅಥವಾ ನಾಗೇಂದ್ರ ಅವರ ಪರವೋ ಎಂಬುದನ್ನು ಸ್ಪಷ್ಟಪಡಿಸಿ ಎಂದು ಆರ್. ಅಶೋಕ್ ಪ್ರಶ್ನಿಸಿದರು.

ಗಣಿಗಾರಿಕೆ ಸೇರಿದಂತೆ 35ಕ್ಕೂ ಹೆಚ್ಚು ಲೂಟಿ ಮತ್ತು ಕಳ್ಳತನ ಪ್ರಕರಣಗಳಲ್ಲಿ ನಾಗೇಂದ್ರ ಭಾಗಿಯಾಗಿದ್ದಾರೆ ಎಂದು ಅವರು ಆರೋಪಿಸಿದರು.

ಸಚಿವ ಸ್ಥಾನ ಕೇವಲ ಅಧಿಕಾರವಲ್ಲ. ಅದ–ಕ್ಕೆ ಸಾಂವಿಧಾನಿಕ ನೈತಿಕತೆ ಮತ್ತು ಜನರ ವಿಶ್ವಾಸ ಅಗತ್ಯ. ಆದರೆ ಈ ಯಾವುದೇ ಲಕ್ಷಣಗಳು ನಾಗೇಂದ್ರ ಅವರಲ್ಲಿ ಕಾಣುತ್ತಿಲ್ಲ ಎಂದು ಅಶೋಕ್ ಟೀಕಿಸಿದರು.

ಸಿಬಿಐ ಮತ್ತು ಜಾರಿ ನಿರ್ದೇಶನಾಲಯದ ತನಿಖೆ ವಿಚಾರದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ದ್ವಂದ್ವ ಹೇಳಿಕೆ ನೀಡುತ್ತಿದ್ದಾರೆ ಎಂದು ಅಶೋಕ್ ಆರೋಪಿಸಿದರು.

ಗೃಹ ಸಚಿವರಾಗಿದ್ದಾಗ ಒಂದು ರೀತಿಯ ಹೇಳಿಕೆ ನೀಡಿದ ಅವರು, ಉಪ ಮುಖ್ಯಮಂತ್ರಿಯಾದ ಬಳಿಕ ಮತ್ತೊಂದು ರೀತಿಯ ಹೇಳಿಕೆ ನೀಡುತ್ತಿದ್ದಾರೆ.

ಸಚಿವರ ಆದೇಶದ ಮೇರೆಗೆ ಹಣ ವರ್ಗಾವಣೆ ಮಾಡಿದ್ದಾಗಿ ಮೃತ ಅಧಿಕಾರಿ ಚಂದ್ರಶೇಖರ್ ಅವರ ಡೆತ್‌ನೋಟ್‌ನಲ್ಲಿ ಉಲ್ಲೇಖವಾಗಿದೆ ಎಂದು ಹೇಳಿದರು.

ಈ ಪ್ರಕರಣಕ್ಕೆ ಸಂಬಂಧಿಸಿದ ಆರೋಪಪಟ್ಟಿ ದಾಖಲಾಗಿದ್ದು, ರಾಜ್ಯಪಾಲರಿಗೂ ಕಳುಹಿಸಲಾಗಿದೆ. ಆರೋಪಪಟ್ಟಿಯಲ್ಲಿ ನಾಗೇಂದ್ರ ಅವರ ಹೆಸರು ಇಲ್ಲದಿದ್ದರೆ ಸಿಬಿಐ ರಾಜ್ಯಪಾಲರ ಬಳಿ ಅನುಮತಿ ಕೇಳುತ್ತಿರಲಿಲ್ಲ ಎಂದು ಅಶೋಕ್ ಹೇಳಿದರು.

ನಾಗೇಂದ್ರ ಮತ್ತು ನೆಕ್ಕುಂಡಿ ನಾಗರಾಜ್ ಹಣ ವರ್ಗಾವಣೆ ಕುರಿತು ಮಾತನಾಡಿರುವುದು ವಿಧಿವಿಜ್ಞಾನ ಪ್ರಯೋಗಾಲಯದ ದಾಖಲೆಗಳಲ್ಲಿದೆ ಎಂದು ಅವರು ಆರೋಪಿಸಿದರು.

ಡಿಕೆಶಿ ನೇತೃತ್ವದ ಸಂಪುಟದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ. ಲೋಕಾಯುಕ್ತ ಹಲವು ಪ್ರಕರಣಗಳಲ್ಲಿ ನಾಗೇಂದ್ರ, ಜನಾರ್ದನ ರೆಡ್ಡಿ ಮತ್ತು ರೇಣುಕಾಚಾರ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳಿದೆ. ಬಿಜೆಪಿಯವರಾದರೆ ಮಾತ್ರ ಅನುಮತಿ ನೀಡುತ್ತಾರೆ ಎಂದು ಅಶೋಕ್ ಆರೋಪಿಸಿದರು.

ನಿಗಮದ ಹಣವನ್ನು ಸುಮಾರು 600 ಖಾತೆಗಳಿಗೆ ವರ್ಗಾವಣೆ ಮಾಡಿ ಐಷಾರಾಮಿ ಕಾರು ಮತ್ತು ಚಿನ್ನ ಖರೀದಿಸಲಾಗಿದೆ ಎಂದು ಆರೋಪಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ.

ನಾಗೇಂದ್ರ ಅವರ ಸಂಬಂಧಿಕರು, ಆಪ್ತರು ಹಾಗೂ ಫಾರ್ಮ್‌ಹೌಸ್ ಮಾಲೀಕರಿಗೆ ಹಣ ಹೋಗಿರುವ ಬಗ್ಗೆ ದಾಖಲೆಗಳಿವೆ ಎಂದು ಅಶೋಕ್ ಹೇಳಿದರು. ಅಧಿಕಾರಿಗಳಿಗೂ ಹಣದ ಪಾಲು ಹೋಗಿದೆ. ಈ ಎಲ್ಲ ದಾಖಲೆಗಳನ್ನು ಸದನದಲ್ಲಿ ನೀಡಲಾಗಿದೆ ಎಂದು ತಿಳಿಸಿದರು.

187 ಕೋಟಿ ರೂ. ಅಲ್ಲ, ಕೇವಲ 89 ಕೋಟಿ ರೂ. ಹಣ ದುರ್ಬಳಕೆಯಾಗಿದೆ ಎಂದು ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾಗಿ ಉಲ್ಲೇಖಿಸಿದ ಅಶೋಕ್, "ಸಿದ್ದರಾಮಯ್ಯ ಇದ್ದಾಗ ನಾಗೇಂದ್ರ ಕಳ್ಳ, ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆದಾಗ ಹೇಗೆ ದೋಷಮುಕ್ತರಾಗುತ್ತಾರೆ?" ಎಂದು ಪ್ರಶ್ನಿಸಿದರು.

ನಾಗೇಂದ್ರ ಬಂಧನದ ಬಳಿಕ ಅವರ ಆಸ್ತಿಗಳನ್ನು ವಶಕ್ಕೆ ಪಡೆಯಲಾಗಿದೆ. ಅವರು ತಪ್ಪು ಮಾಡದೇ ಇದ್ದಿದ್ದರೆ ಆಸ್ತಿಗಳನ್ನು ಯಾಕೆ ವಶಕ್ಕೆ ಪಡೆ–ಯುತ್ತಿದ್ದರು ಎಂದು ಪ್ರಶ್ನಿಸಿದರು. ನಾಗೇಂದ್ರ ಹಾಗೂ ಅವರ ಆಪ್ತ ನೆಕ್ಕುಂಡಿ ನಾಗರಾಜ್ ಮೊಬೈಲ್‌ನಲ್ಲಿ ಮಾತನಾಡಿರುವುದು ಕೂಡ ದಾಖಲಾಗಿದೆ. ಎಸ್‌ಐಟಿ ವರದಿಯಲ್ಲೂ ನಾಗೇಂದ್ರ ಅವರ ಹೆಸರು ಇದೆ ಎಂದು ಅಶೋಕ್ ಹೇಳಿದರು.

ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ದಲಿತರ 42 ಸಾವಿರ ಕೋಟಿ ರೂ. ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗಿದೆ ಎಂದು ಅಶೋಕ್ ಆರೋಪಿಸಿದರು. ಈಗ ದಲಿತರ ಕಲ್ಯಾಣಕ್ಕೆ ಬಳಕೆಯಾಗಬೇಕಿದ್ದ ಹಣ ದುರ್ಬಳಕೆಯಾಗಿದೆ. ನಾವು ದಲಿತರನ್ನು ಗುರಿಯಾಗಿಸುತ್ತಿದ್ದೇವೆ ಎಂದು ಕಾಂಗ್ರೆಸ್ ಆರೋಪಿಸುತ್ತಿದೆ. ನಾಗೇಂದ್ರ ಮಾತ್ರ ದಲಿತರಲ್ಲ. ಮಹದೇವಪ್ಪ, ತುಕಾರಾಂ ಅವರ ಪತ್ನಿ ಅನ್ನಪೂರ್ಣ ಹಾಗೂ ಕಂಪ್ಲಿ ಗಣೇಶ್ ಕೂಡ ದಲಿತರೇ. ದಲಿತರ ಹಣ ದುರ್ಬಳಕೆ ಮಾಡುವಾಗ ನಾಗೇಂದ್ರ ಅವರಿಗೆ ಜ್ಞಾನ ಇರಲಿಲ್ಲವೇ ಎಂದು ಪ್ರಶ್ನಿಸಿದರು. ಈ ಸರ್ಕಾರಕ್ಕೆ ಯಾವುದೇ ನೈತಿಕತೆ ಇಲ್ಲ ಎಂದು ಅಶೋಕ್ ಟೀಕಿಸಿದರು.

ರಾಜಭವನದ ಬಾಗಿಲು ತಟ್ಟುತ್ತೇವೆ

ನಮ್ಮ ಹೋರಾಟ ಸದನದ ಒಳಗೆ ಮತ್ತು ಹೊರಗೆ ನಿರಂತರವಾಗಿ ನಡೆಯಲಿದೆ. ಅಂತಿಮವಾಗಿ ರಾಜ್ಯಪಾಲರ ಬಳಿಗೂ ಹೋಗುತ್ತೇವೆ. ಅಗತ್ಯಬಿದ್ದರೆ ರಾಜಭವನದ ಬಾಗಿಲು ತಟ್ಟುತ್ತೇವೆ. ಮುಂದಿನ ದಿನಗಳಲ್ಲಿ ಇನ್ನಷ್ಟು ರೀತಿಯ ಪ್ರತಿಭಟನೆಗಳ ಬಗ್ಗೆಯೂ ತೀರ್ಮಾನ ಕೈಗೊಳ್ಳುತ್ತೇವೆ ಎಂದು ಅಶೋಕ್ ಹೇಳಿದರು.

ಹೋರಾಟದ ಬೆಂಕಿ ಈಗಾಗಲೇ ಜ್ವಾಲೆಯಾಗಿದೆ. ನಾಗೇಂದ್ರ ಪರ ಯಾರೂ ಮಾತನಾಡುತ್ತಿಲ್ಲ. ನಾಗೇಂದ್ರ ಅವರ ರಾಜೀನಾಮೆ ಪಡೆದು ನೈಸ್ ಮತ್ತು ಬಿಡದಿ ವಿಚಾರಗಳ ಬಗ್ಗೆ ಚರ್ಚೆಗೆ ಅವಕಾಶ ನೀಡಲು ಕಾಂಗ್ರೆಸ್‌ಗೆ ಒಳ್ಳೆಯ ಬುದ್ಧಿಯನ್ನು ದೇವರು ನೀಡಲಿ ಎಂಬ ಆಶಾಭಾವನೆ ಇದೆ. ನಮಗೂ ಅಧಿವೇಶನ ಸುಗಮವಾಗಿ ನಡೆಯಬೇಕು ಎಂಬ ಜವಾಬ್ದಾರಿ ಇದೆ ಎಂದು ಆರ್. ಅಶೋಕ್ ಹೇಳಿದರು.

ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಗೆ
ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ..
ಆಸಕ್ತರು ಈ ಕೂಡಲೇ ಸಂಪರ್ಕಿಸಿ

# ಲಿಂಗಾಯತ ವೀರಶೈವ ಸಮಾಜ ಒಡೆಯುತ್ತಿರುವ ರಾಜಕಾರಣಿಗಳು

ಮಹಾತ್ಯಾಗಿಯಾಗಿ ಬದುಕಿದ ಅವರು, ಯಾವುದೇ ಸ್ವಾರ್ಥವಿಲ್ಲದೆ ಸಮಾಜಕ್ಕಾಗಿ ಸೇವೆ ಸಲ್ಲಿಸಿದರು. ಅವರ ಆದರ್ಶ ಜೀವನ ಇಂದಿನ ಯುವಜನತೆಗೆ ಮಾದರಿಯಾಗಿದೆ ಎಂದು ಸ್ವಾಮೀಜಿ ಹೇಳಿದರು.

ಉತ್ತರ ಕರ್ನಾಟಕದಲ್ಲಿ ಕೆಎಲ್‌ಇ ಸಂಸ್ಥೆಯ ಬೆಳವಣಿಗೆಗೆ ಶಿರಸಂಗಿ ಲಿಂಗರಾಜ ದೇಸಾಯಿ ಅವರ ಕೊಡುಗೆ ಅಪಾರವಾಗಿದೆ. ಶಿಕ್ಷಣ, ಸಮಾಜಸೇವೆ ಹಾಗೂ ಸಮುದಾಯದ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆಯನ್ನು ಮುಂದಿನ ಪೀಳಿಗೆ ಮರೆಯಬಾರದು. ವಿದ್ಯಾರ್ಥಿಗಳು ಅವರ ತ್ಯಾಗ, ಸೇವಾ ಮನೋಭಾವ ಮತ್ತು ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಲಿಂಗಾಯತ–ವೀರಶೈವ ಸಮಾಜದ ನಡುವೆ ಭಿನ್ನಾಭಿಪ್ರಾಯ ಮೂಡಿಸುವ ಬದಲು ಸಮಾಜದ ಮುಖಂಡರು ಹಾಗೂ ರಾಜಕಾರಣಿಗಳು ಒಗ್ಗಟ್ಟಿಗೆ ಆದ್ಯತೆ ನೀಡಬೇಕು. ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ದಿಂಗಾಲೇಶ್ವರ ಸ್ವಾಮೀಜಿ ತಿಳಿಸಿದರು.

# ಹಡಗು ಮುಳುಗಡೆ ಇಬ್ಬರ ರಕ್ಷಣೆ, 22 ಮಂದಿ ನಾಪತ್ತೆ

–1ನೇ ಪಟುದಿಂದ...

ಮುಳುಗಡೆಯಾಗಿದೆ. ಹಡಗಿನಲ್ಲಿದ್ದ 24 ಮಂದಿಯಲ್ಲಿ ಇಬ್ಬರನ್ನು ರಕ್ಷಿಸಲಾಗಿದೆ. 22 ಮಂದಿ ನಾಪತ್ತೆಯಾಗಿದ್ದು, ಅವರಿಗಾಗಿ ಶೋಧ ಕಾರ್ಯ ನಡೆಯುತ್ತಿದೆ.

ಕಬ್ಬಿಣದ ಅದಿರಿನ ಸರಕುಗಳನ್ನ ತುಂಬಿಕೊಂಡು ಒಡಿಶಾದಿಂದ ಸಿಂಗಾಪುರದ ಕಡೆಗೆ ಹಡಗು ಸಾಗುತ್ತಿತ್ತು. ಹಡಗು ಮುಂದಿನ ಪ್ರಯಾಣ ಆರಂಭಿಸುವುದಕ್ಕೂ ಮುನ್ನ ಆ.20 ರಂದು ಪ್ಯಾರದೀಪ್ ಕರಾವಳಿಗೆ ತಲುಪಿತ್ತು. ಇಲ್ಲಿಂದ ಶುಕ್ರವಾರ ಸಂಚಾರ ಆರಂಭಿಸಿತ್ತು.

ಹಡಗು ಸಂಪರ್ಕ ಕಳೆದುಕೊಂಡ ಬಗ್ಗೆ ಕಂಪನಿ ಶನಿವಾರ ಬೆಳಿಗ್ಗೆ 11:48ಕ್ಕೆ, ಶ್ರೀ ವಿಜಯ ಪುರಂನಲ್ಲಿರುವ ಐಸಿಜಿಯ ಕಡಲ ರಕ್ಷಣಾ ಸಮನ್ವಯ ಕೇಂದ್ರಕ್ಕೆ (ಎಂಆರ್‌ಸಿಸಿ) ಮಾಹಿತಿ ರವಾನಿಸಿತ್ತು. ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗೆ ಸಹಕರಿಸುವಂತೆ ಮನವಿ ಮಾಡಿತ್ತು.

ಮನವಿ ಬಂದ ತಕ್ಷಣ ಎಂಆರ್‌ಸಿಸಿ ಮುಳುಗಿದ ಹಡಗಿನ ಸಮೀಪದ ಮಾರ್ಗದಲ್ಲಿ ಸಂಚರಿಸುತ್ತಿದ್ದ ಎಂಟಿ ಐಸೊಪೊಸ್ ವಾಣಿಜ್ಯ ಹಡಗಿಗೆ ಮಾಹಿತಿ ನೀಡಿತ್ತು. ಬಳಿಕ ಅಲ್ಲಿಗೆ ತೆರಳಿದ್ದ ಹಡಗು ಲೈಫ್‌ರಾಫ್ಟ್‌ನಿಂದ ಇಬ್ಬರನ್ನು ರಕ್ಷಿಸಿತ್ತು. ಈಗ ಇಬ್ಬರು ಸಿಬ್ಬಂದಿಯ ಸ್ಥಿತಿ ಹೇಗಿದೆ ಎಂಬ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

ಉಳಿದ ಸಿಬ್ಬಂದಿಯನ್ನು ಪತ್ತೆಹಚ್ಚಲು ಭಾರತೀಯ ಕರಾವಳಿ ಕಾವಲು ಪಡೆ ಮತ್ತು ಭಾರತೀಯ ನೌಕಾಪಡೆ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ. ಶೋಧನೆಗಾಗಿ ಐಸಿಜಿ ಹಡಗುಗಳಾದ ವರದ್ ಮತ್ತು ಅನ್ಮೋಲ್‌ನ್ನು ನಿಯೋಜಿಸಲಾಗಿದೆ.

ಹಡಗು ಮುಳುಗಲು ಕಾರಣವೇನು ಎಂಬ ಬಗ್ಗೆ ನಿಖರ ಮಾಹಿತಿ ಲಭ್ಯವಾಗಿಲ್ಲ. ಅಲ್ಲದೇ ಹಡಗು ಮುಳುಗುವ ಮೊದಲು ಅದರ ಸ್ಥಿತಿ ಮತ್ತು ಕಾಣೆಯಾದ ಸಿಬ್ಬಂದಿ ಬಗ್ಗೆ ಮಾಹಿತಿ ನಿರೀಕ್ಷಿಸಲಾಗಿದೆ.

## ಮುರುಳಿಧರ್ ಹಾಲಪ್ಪ ನಿವಾಸಕ್ಕೆ ಶ್ರೀ ಸಿದ್ಧಲಿಂಗ ಸ್ವಾಮೀಜಿ ಭೇಟಿ: ಮಠದ ಸೇವೆ ವಿಶ್ವಮಟ್ಟಕ್ಕೆ ವಿಸ್ತರಿಸಲು ಮನವಿ



ಹಾಲಪ್ಪ ಪ್ರತಿಷ್ಠಾನದ ಅಧ್ಯಕ್ಷರಾದ ಮುರುಳಿಧರ್ ಹಾಲಪ್ಪ ಅವರ ನಿವಾಸಕ್ಕೆ ಸಿದ್ಧಗಂಗಾ ಮಠದ ಅಧ್ಯಕ್ಷರಾದ ಶ್ರೀ ಶ್ರೀ ಸಿದ್ಧಲಿಂಗ ಸ್ವಾಮೀಜಿಗಳು ಸೌಹಾರ್ದಯುತ ಭೇಟಿ ನೀಡಿ–ದರು. ಈ ಶುಭ ಸಂದರ್ಭದಲ್ಲಿ ಮುರುಳಿಧರ್ ಹಾಲಪ್ಪ ಹಾಗೂ ಅವರ ಕುಟುಂಬಸ್ಥರು ಸ್ವಾಮೀಜಿಗಳನ್ನು ಭಕ್ತಿಯಿಂದ ಸ್ವಾಗತಿಸಿ, ಆಶೀರ್ವಾದ ಪಡೆದರು. ಸ್ವಾಮೀಜಿಗಳೊಂದಿಗೆ ನಡೆದ ಸಮಾಲೋಚನೆಯಲ್ಲಿ, ಸಿದ್ಧಗಂಗಾ ಮಠದ ಶೈಕ್ಷಣಿಕ ಮತ್ತು ಸಾಮಾಜಿಕ ಕೊಡುಗೆಗಳ ಕುರಿತು ಪ್ರಸ್ತಾಪಿಸಿದ ಮುರುಳಿಧರ್ ಹಾಲಪ್ಪ ರವರು ಮಠದ ಕಾಯಕವನ್ನು ಇನ್ನಷ್ಟು ವಿಸ್ತರಿಸುವಂತೆ ಮನವಿ ಮಾಡಿದರು. ಪೂಜ್ಯ ಸ್ವಾಮೀಜಿಗಳೇ, ಸಿದ್ಧಗಂಗಾ ಮಠವು ನಮ್ಮ ಕರ್ನಾಟಕ ರಾಜ್ಯದಲ್ಲಷ್ಟೇ ಅಲ್ಲದೆ, ಲಕ್ಷಾಂತರ ವಿದ್ಯಾರ್ಥಿಗಳಿಗೆ ದಾಸೋಹ ಮತ್ತು ಶಿಕ್ಷಣ ನೀಡುತ್ತಾ ಮಾದರಿಯಾಗಿದೆ. ಈ ಪವಿತ್ರ ಸೇವೆಯು ಕೇವಲ ನಮ್ಮ ರಾಜ್ಯಕ್ಕೆ ಸೀಮಿತವಾಗದೆ, ಹೊರ ರಾಜ್ಯಗಳಿಗೂ ಹಾಗೂ ಹೊರದೇಶಗಳಿಗೂ ವಿಸ್ತರಣೆಯಾಗಬೇಕು. ವಿದೇಶಗಳಲ್ಲೂ ಸಿದ್ಧಗಂಗಾ ಮಠದ ಶಾಲಾ–ಕಾಲೇಜುಗಳು ಪ್ರಾರಂಭವಾಗಿ, ಅಲ್ಲಿಯೂ ಬಡ ವಿದ್ಯಾರ್ಥಿಗಳಿಗೆ ಉಚಿತ ವಿದ್ಯಾಭ್ಯಾಸ ಮತ್ತು ಅನ್ನದಾಸೋಹ ತಲುಪುವಂತಾಗಬೇಕು ಎಂಬುದು ನಮ್ಮ ಆಶಯ ಹಾಗೂ ಇದೇ ಸಂದರ್ಭದಲ್ಲಿ ಹಾಲಪ್ಪ ಪ್ರತಿಷ್ಠಾನ ಅಧ್ಯಕ್ಷರಾದ ಮುರಳಿಧರ್ ಹಾಲಪ್ಪ ರವರು ಮಹಿಳಾ ರೈತರನ್ನು ಗುರುತಿಸಿ ಅವರಿಗೆ ಪ್ರಶಸ್ತಿಗಳನ್ನು ನೀಡಿದರು ಶ್ರೀಗಳ ಭೇಟಿಯಿಂದ ಹಾಲಪ್ಪ ಪ್ರತಿಷ್ಠಾನದ ಮುಖಂಡರು ಹಾಗೂ ಅಭಿಮಾನಿಗಳಲ್ಲಿ ಸಂತಸದ ವಾತಾವರಣ ಮೂಡಿದ್ದು, ಸ್ವಾಮೀಜಿಗಳು ಮುರುಳಿಧರ್ ಹಾಲಪ್ಪ ಅವರ ಮನವಿಯನ್ನು ಆಲಿಸಿ ಶುಭ ಹಾರೈಸಿದರು.




ಮೈಸೂರು : ಅಂಜುಮನ್ ಉರ್ದು ಶಾಖೆ ಮೈಸೂರ್ ಇವರ ವತಿಯಿಂದ ಉರ್ದು ಪರೀಕ್ಷೆಯಲ್ಲಿ ಶೇಕಡ 90ರಷ್ಟು ಅಂಕ ಪಡೆದ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು ಹುಣಸೂರು ನಗರದ ಸರ್ಕಾರಿ ಮಹಿಳಾ ಡಿಗ್ರಿ ಕಾಲೇಜಿನ ವಿದ್ಯಾರ್ಥಿ ಉರ್ದು ಭಾಷೆಯಲ್ಲಿ ಅತಿ ಹೆಚ್ಚು ಅಂಕಪಡಿದ ಕುಮಾರಿ ಅಂಜುಮ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇಕಡ 90% ಎಷ್ಟು ಅಂಕಪಡಿದು ತಾಲೂಕಿಗೆ ಪ್ರಥಮವಾಗಿದ್ದರು ಹಾಗೂ ಪ್ರತಿ ಪದವಿ ಪರೀಕ್ಷೆಗಳಲ್ಲಿ ಇವರು 90 % ಅಂಗಗೊಳಿಸಿದ್ದರು ಅಂಜುಮನ್ ಉರ್ದು ಹಿಂದ್ ಇವರಿಗೆ ಗುರುತಿಸಿ ಮೈಸೂರಿನಲ್ಲಿ ಸನ್ಮಾನ ಮಾಡಿ ಗೌರವಿಸಿದ್ದರು ಇದೇ ಸಂದರ್ಭದಲ್ಲಿ ಸಾಧಕ ವಿದ್ಯಾರ್ಥಿಗಳಿಗೆ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಿದ್ದರು ಹಾಗೂ ಕಾರ್ಯಕ್ರಮದಲ್ಲಿ ಉಪನ್ಯಾಸಕರು ವಿದ್ಯಾರ್ಥಿಗಳು ಉಪಸ್ಥಿದ್ದರು

## ಹೆಚ್‌ಐವಿ ಪರೀಕ್ಷೆ ಮಾಡಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಜಾಗೃತಿ



ಬಳ್ಳಾರಿ / ಕುರುಗೋಡು: ಹೆಚ್‌ಐವಿ ಸೋಂಕಿನ ಬಗ್ಗೆ ನಿರ್ಲಕ್ಷ್ಯ ವಹಿಸದೆ ಪ್ರತಿಯೊಬ್ಬರೂ ತಮ್ಮ ಹೆಚ್‌ಐವಿ ಸ್ಥಿತಿಯನ್ನು ಪರೀಕ್ಷಿಸಿಕೊಳ್ಳಬೇಕು ಎಂದು ಕುರುಗೋಡು ಸಮುದಾಯ ಆರೋಗ್ಯ ಕೇಂದ್ರದ ಐಸಿಟಿಸಿ ಆಪ್ತ ಸಮಾಲೋಚಕ ಕರಿಬಸವ ಎನ್. ಕರೆ ನೀಡಿದರು. ಭೌಗೋಳಿಕನಕ್ಷೆಗಳು ಮತ್ತು ವಿವರಗಳನ್ನು ಅನ್ವೇಷಿಸುವುದು ಕುರುಗೋಡು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಕೆ–ಸ್ಯಾಪ್ ಹಾಗೂ ಜಿಲ್ಲಾ ಮತ್ತು ತಾಲೂಕು ಆರೋಗ್ಯ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ಮೊಬಿಲೈಸೇಷನ್ ಫಾರ್ ಏಡ್ಸ್ ಸುರಕ್ಷಾ ಅಭಿಯಾನ 2026' ಹಾಗೂ ರಾಜ್ಯ ಮಟ್ಟದ ಮಾಸ್ಕಾಟ್ (ಲೋಗೋ) ಸ್ಪರ್ಧೆ ಕುರಿತ ವಿಶೇಷ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮವನ್ನು ಕಾಲೇಜಿನ ಪ್ರಾಂಶುಪಾಲೆ ಬಿ. ಶಾಂತಲಾ ಉದ್ಘಾಟಿಸಿದರು. ಕಾಲೇಜುಗಳುಮತ್ತು ವಿಶ್ವವಿದ್ಯಾಲಯಗಳನ್ನು ಅನ್ವೇಷಿಸುವುದು ಹೆಚ್‌ಐವಿ ಸೋಂಕಿನ ಬಗ್ಗೆ ಅರಿವು ಮೂಡಿಸಿದ ಕರಿಬಸವ ಎನ್., ಸರ್ಕಾರಿ ಆಸ್ಪತ್ರೆಗಳ ಐಸಿಟಿಸಿ, ಎಆರ್‌ಟಿ ಹಾಗೂ ಎಸ್ಟಿಐ ಕೇಂದ್ರಗಳಲ್ಲಿ ಸಂಪೂರ್ಣ ಗೌಪ್ಯತೆಯೊಂದಿಗೆ ಉಚಿತ ಹೆಚ್‌ಐವಿ ತಪಾಸಣೆ ಮತ್ತು ಆಪ್ತ ಸಮಾಲೋಚನೆ ಸೌಲಭ್ಯ ಲಭ್ಯವಿದೆ ಎಂದು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ ಆಯೋಜಿಸಿರುವ ರಾಜ್ಯ ಮಟ್ಟದ ಮಾಸ್ಕಾಟ್ ಸ್ಪರ್ಧೆಯ ವಿವರಗಳನ್ನೂ ತಿಳಿಸಲಾಯಿತು.

ಹೆಚ್‌ಐವಿ ತಡೆ, ಜಾಗೃತಿ ಮತ್ತು ಭರವಸೆಯನ್ನು ಪ್ರತಿಬಿಂಬಿಸುವ ಸ್ವಂತಿಕೆ–ಯ ವಿನ್ಯಾಸಗಳನ್ನು ಆಹ್ವಾನಿಸಲಾಗಿದ್ದು, ವಿಜೇತರಿಗೆ 25 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು ಎಂದು ತಿಳಿಸಲಾಯಿತು. ಸ್ಪರ್ಧೆಗೆ ಆಗಸ್ಟ್ 31 ಕೊನೆಯ ದಿನವಾಗಿದೆ.

ಕಾರ್ಯಕ್ರಮದಲ್ಲಿ ಮಂಜುನಾಥ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕ ವೀರಲಿಂಗಪ್ಪ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕರಾದ ವಿಶ್ವನಾಥ, ಪ್ರಥಮ ದರ್ಜೆ ಸಹಾಯಕ ಗಣೇಶ್, ಸ್ನೇಹಾ ಕ್ಲಿನಿಕ್ ಆಪ್ತ ಸಮಾಲೋಚಕ ಮಹಬೂಬ್ ಭಾಷಾ, ಸಿಬ್ಬಂದಿಗಳಾದ ಗೋವರ್ಧನ್, ಗಾದಿಲಿಂಗಪ್ಪ ಹಾಗೂ ಕಾಲೇಜಿನ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ZBS ಗ್ರೂಪ್ ವತಿಯಿಂದ 280 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ಶಿರಾ: ನಗರದ ಜಾಮಿಯಾ ಶಾದಿ ಮಹಲ್‌ನಲ್ಲಿ ಜಿಬಿಖ ಗ್ರೂಪ್ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸ್ಕಾಲರ್‌ಶಿಪ್ ನೀಡಿ ಗೌರವಿಸಲಾಯಿತು.

ಇನ್ನು ಈ ಕಾರ್ಯಕ್ರಮದಲ್ಲಿ ಸುಮಾರು 270ರಿಂದ 280 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ಅವರ ಶೈಕ್ಷಣಿಕ ಸಾಧನೆಯನ್ನು ಪ್ರೋತ್ಸಾಹಿಸಲಾಯಿತು.

ವಿದ್ಯಾರ್ಥಿಗಳ ಸಾಧನೆಗೆ ಪೋಷಕರು ಹಾಗೂ ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಿರಾ ನಗರಸಭಾ ಅಧ್ಯಕ್ಷ ಮೊಹಮ್ಮದ್ ಜಿಶಾನ್, ನಾವು ಸತ್ತಾಗ ನಮ್ಮೊಂದಿಗೆ ಏನನ್ನೂ ತೆಗೆದುಕೊಂಡು ಹೋಗಲು ಸಾಧ್ಯವಿಲ್ಲ. ನಮ್ಮ ಮಕ್ಕಳಿಗೆ ನೀಡುವ ವಿದ್ಯಾಭ್ಯಾಸವೇ ನಿಜವಾದ ಆಸ್ತಿ. ಆದ್ದರಿಂದ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಸರಿಯಾದ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಮುಸ್ಲಿಂ ಸಮುದಾಯದ ಮಕ್ಕಳು ಸಣ್ಣಪುಟ್ಟ ಕೆಲಸಗಳಿಗೆ ಸೀಮಿತರಾಗದೆ ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಬೇಕು. ಮುಂದಿನ ದಿನಗಳಲ್ಲಿ ವೈದ್ಯರು, ಇಂಜಿನಿಯರ್‌ಗಳು, ಐಪಿಎಸ್ ಅಧಿಕಾರಿಗಳು ಸೇರಿದಂತೆ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮುದಾಯಕ್ಕೆ ಉತ್ತಮ ಹೆಸರು ತರುವಂತೆ ಪೋಷಕರು ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶಿರಾ ನಗರಸಭಾ ಉಪಾಧ್ಯಕ್ಷ ಲಕ್ಷ್ಮಿಕಾಂತ್, ಮಾಜಿ ನಗರಸಭಾ ಅಧ್ಯಕ್ಷ ಜೆಡಿಎಸ್ ರಾಮಣ್ಣ, ಕೋಟೆ ಲೋಕಣ್ಣ, ಸಿಎಂಸಿ ಫರ್ಮಾನ್, ಮಝುರುಲ್ಲಾ ಖಾನ್, ನೂರುದ್ದೀನ್, ನಗರಸಭಾ ಸದಸ್ಯ ಅಜಯ್ ಕುಮಾರ್, ಜೆಡಿಎಸ್ ಮಾಜಿ ನಗರಸಭಾ ಅಧ್ಯಕ್ಷ ರಘು, ಜೆಡಿಎಸ್‌ನ ಬರಗೂರು ಸಲೀಂ, ರಹಮತ್, ನಗರಸಭಾ ಸದಸ್ಯ ಮೊಹಮ್ಮದ್ ಬುರಾನ್, ಕಾಂಗ್ರೆಸ್ ಮುಖಂಡ ಸಲ್ಮಾನ್ ಸೇರಿದಂತೆ ಹಲವು ಮುಖಂಡರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಜಿಬಿಖ ಗ್ರೂಪ್ ಹಮ್ಮಿಕೊಂಡಿರುವ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಹಲವು ಮುಖಂಡರು ಮೆಚ್ಚುಗೆ ವ್ಯಕ್ತಪಡಿಸಿದರು. ಮಕ್ಕಳ ಶೈಕ್ಷಣಿಕ ಸಾಧನೆಯನ್ನು ಗುರುತಿಸಿ ಸನ್ಮಾನಿಸಿರುವುದು ವಿದ್ಯಾರ್ಥಿಗಳಿಗೆ ಮತ್ತಷ್ಟು ಉತ್ಸಾಹ ತುಂಬಿದೆ ಎಂದು ಪೋಷಕರು ಸಂತಸ ವ್ಯಕ್ತಪಡಿಸಿದರು.

## ಈದ್ ಮಿಲಾದ್, ಗೌರಿ ಗಣೇಶ ಹಬ್ಬ: ನಿಯಮ ಪಾಲನೆಗೆ ಪೊಲೀಸರ ಸೂಚನೆ




ಶಿರಾ: ಈದ್ ಮಿಲಾದ್ ಹಾಗೂ ಗೌರಿ ಗಣೇಶ ಹಬ್ಬಗಳ ಹಿನ್ನೆಲೆಯಲ್ಲಿ ಶಿರಾ ನಗರ ಪೊಲೀಸ್ ಠಾಣೆ ಆವರಣದಲ್ಲಿ ಧ್ವನಿವರ್ಧಕ, ಟೆಂಟ್ ಹೌಸ್ ಹಾಗೂ ಫ್ಲೆಕ್ಸ್ ಅಂಗಡಿ ಮಾಲೀಕರ ಸಭೆ ನಡೆಯಿತು. ಹಬ್ಬಗಳ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸರು ವಿವಿಧ ನಿಯಮಗಳು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅಗತ್ಯ ಸೂಚನೆಗಳನ್ನು ನೀಡಿದರು.

ಶಿರಾ ಡಿವೈಎಸ್‌ಪಿ ಬಿ.ಕೆ. ಶೇಖರ್ ಅವರ ಮಾರ್ಗದರ್ಶನದಲ್ಲಿ, ಶಿರಾ ನಗರ ಠಾಣೆಯ ಸಿಪಿಐ ಪ್ರವೀಣ್ ಕುಮಾರ್ ನೇತೃತ್ವದಲ್ಲಿ ಸಭೆ ನಡೆಯಿತು.

ಧ್ವನಿವರ್ಧಕ ಬಳಕೆದಾರರು ಯಾವುದೇ ಕಾರಣಕ್ಕೂ ಡಿಜೆ ಬಳಸಲು ಅವಕಾಶವಿಲ್ಲ. ನಿಯಮ ಉಲ್ಲಂಘಿಸಿ ಡಿಜೆ ಬಳಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ಎಚ್ಚರಿಕೆ ನೀಡಿದರು. ಸಣ್ಣ ಪ್ರಮಾಣದ ಧ್ವನಿವರ್ಧಕ ಬಳಸುವವರು ಪೊಲೀಸ್ ಠಾಣೆಗೆ ಬಂದು ಲಿಖಿತ ದಾಖಲೆಗಳನ್ನು ಸಲ್ಲಿಸಿ ಅಗತ್ಯ ಅನುಮತಿ ಪಡೆಯಬೇಕು ಎಂದು ಸೂಚಿಸಿದರು.

ಹಬ್ಬದ ಸಂದರ್ಭದಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸುವವರು ನಗರಸಭೆ ಹಾಗೂ ಕೆಇಬಿ ಸಂಬಂಧಪಟ್ಟ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯಬೇಕು. ದೀಪಗಳ ಅಳವಡಿಕೆ ವೇಳೆ ಬೆಂಕಿ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಅಗ್ನಿ ನಂದಿಸುವ ಉಪಕರಣಗಳು ಹಾಗೂ ನೀರಿನ ವ್ಯವಸ್ಥೆಯನ್ನು ಕಡ್ಡಾಯವಾಗಿ ಇಟ್ಟುಕೊಳ್ಳಬೇಕು ಎಂದು ತಿಳಿಸಲಾಯಿತು.

ಟೆಂಟ್ ಹೌಸ್ ಮಾಲೀಕರು ನಗರಸಭೆಯಿಂದ ಅನುಮತಿ ಪಡೆಯದೆ ಟೆಂಟ್‌ಗಳನ್ನು ಹಾಕಬಾರದು. ಅನುಮತಿ ಇಲ್ಲದೆ ಟೆಂಟ್ ಹಾಕಿರುವುದು ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ಎಚ್ಚರಿಕೆ ನೀಡಿದರು.

ಫ್ಲೆಕ್ಸ್ ಅಂಗಡಿ ಮಾಲೀಕರು ಕೋಮು ಗಲಭೆಗೆ ಪ್ರಚೋದನೆ ನೀಡುವಂತಹ ಪೋಸ್ಟರ್ ಅಥವಾ ಫ್ಲೆಕ್ಸ್‌ಗಳನ್ನು ಮುದ್ರಿಸಬಾರದು. ಅನ್ಯ ದೇಶಗಳ ಬಾವುಟಗಳು, ಪ್ರಚೋದನಕಾರಿ ಚಿತ್ರಗಳು ಹಾಗೂ ಮಚ್ಚು, ಲಾಂಗು ಸೇರಿದಂತೆ ಶಸ್ತ್ರಾಸ್ತ್ರಗಳನ್ನು ಪ್ರದರ್ಶಿಸುವ ಚಿತ್ರಗಳಿರುವ ಫ್ಲೆಕ್ಸ್‌ಗಳನ್ನು ಮುದ್ರಿಸಿದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸೂಚಿಸಿದರು.

ಇಂತಹ ಪ್ರಚೋದನಕಾರಿ ಫ್ಲೆಕ್ಸ್‌ಗಳನ್ನು ಮುದ್ರಿಸುವಂತೆ ಯಾರಾದರೂ ಅಂಗಡಿ ಮಾಲೀಕರ ಮೇಲೆ ಒತ್ತಡ ಹೇರಿದರೆ ಕೂಡಲೇ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪೊಲೀಸರು ಮನವಿ ಮಾಡಿದರು.

ಸಭೆಯಲ್ಲಿ ಶಿರಾ ನಗರ ಪೊಲೀಸ್ ಠಾಣೆ–ಯ ಪಿಎಸ್‌ಐ ಆನಂದ್ ಕುಮಾರ್, ಪೊಲೀಸ್ ಸಿಬ್ಬಂದಿಗಳಾದ ನಾಗರಾಜ್, ಮಾರುತಿ ಸೇರಿದಂತೆ ಧ್ವನಿವರ್ಧಕ, ಟೆಂಟ್ ಹೌಸ್ ಹಾಗೂ ಫ್ಲೆಕ್ಸ್ ಅಂಗಡಿ ಮಾಲೀಕರು ಉಪಸ್ಥಿತರಿದ್ದರು.

## ರೋಣ ಕ್ಷೇತ್ರಕ್ಕೆ ಆಗಮಿಸಿದ ಜಿ.ಎಸ್. ಪಾಟೀಲ್ ಅವರಿಗೆ ಭವ್ಯ ಸ್ವಾಗತ ಹಾಗೂ ಮೆರವಣಿಗೆ



ರೋಣ: ರಾಜ್ಯ ವಿಧಾನಸಭೆಯ 18ನೇ ಸಭಾಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಪ್ರಥಮ ಬಾರಿಗೆ ರೋಣ ತಾಲೂಕಿಗೆ ಆಗಮಿಸಿದ ಜಿ.ಎಸ್. ಪಾಟೀಲ್ ಅವರಿಗೆ ಅತ್ಯಂತ ವಿಜೃಂಭಣೆಯಿಂದ ಭವ್ಯ ಸ್ವಾಗತ ಕೋರಲಾಯಿತು.

ಬೃಹತ್ ಹಾರ, ಆರತಿಯೊಂದಿಗೆ ಅದ್ದೂರಿ ಸ್ವಾಗತ ಕ್ಷೇತ್ರಕ್ಕೆ ಆಗಮಿಸಿದ ಜಿ.ಎಸ್. ಪಾಟೀಲ್ ಅವರನ್ನು ರೋಣದ ಸೂಡಿ ವೃತ್ತ ಹಾಗೂ ಗಜೇಂದ್ರಗಡದ ಕಾಲಕಾಲೇಶ್ವರ ವೃತ್ತಗಳಲ್ಲಿ ಅಭಿಮಾನಿಗಳು ಹಾಗೂ ಬೆಂಬಲಿಗರು ಬೃಹತ್ ಸೇಬಿನ ಹಾರ ಹಾಕಿ, ಆರತಿ ಬೆಳಗಿ ಸಂಭ್ರಮದಿಂದ ಸ್ವಾಗತಿಸಿದರು. ಮೆರವಣಿಗೆಯ ಉದ್ದಕ್ಕೂ ಜನಾಭಿಮಾನ ಕಂಡು ಜಿ.ಎಸ್. ಪಾಟೀಲ್ ಅವರು ಭಾವುಕರಾದರು. ಈ ಸಂದರ್ಭದಲ್ಲಿ ಪ್ರಸಿದ್ಧ ಶಿವಾನಂದ ಮಠ ಹಾಗೂ ಸಿದ್ಧಾರೂಢ ಮಠಗಳಿಗೆ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದರು.

ಕ್ಷೇತ್ರದ ಅಭಿವೃದ್ಧಿ ಕುಂಠಿತಗೊಳ್ಳುವುದಿಲ್ಲ: ಜಿ.ಎಸ್. ಪಾಟೀಲ್ ಸ್ವೀಕಾರ ಮತ್ತು ಸನ್ಮಾನ ಸಮಾರಂಭದ ಬಳಿಕ ಮಾತನಾಡಿದ ಅವರು, "ಕ್ಷೇತ್ರದ ಜನತೆ ನನಗೆ ಹೆಚ್ಚಿನ ಶಕ್ತಿ ನೀಡಿದ್ದಾರೆ. ಸಭಾಧ್ಯಕ್ಷ ಸ್ಥಾನ ಸಿಕ್ಕಿದ್ದರಿಂದ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳು ಎಲ್ಲೂ ಕುಂಠಿತಗೊಳ್ಳುವುದಿಲ್ಲ. ಸರ್ವ ಜನಾಂಗದ ಕಲ್ಯಾಣ ಹಾಗೂ ಕ್ಷೇತ್ರದ ಪ್ರಗತಿಗೆ ನಾನು ಸದಾ ಶ್ರಮಿಸುತ್ತೇನೆ" ಎಂದು ಭರವಸೆ ನೀಡಿದರು.

ಈ ವಿಜೃಂಭಣೆಯ ಕಾರ್ಯಕ್ರಮದಲ್ಲಿ ಪ್ರಮುಖ ಮುಖಂಡರಾದ ಮಿಥುನ ಜಿ. ಪಾಟೀಲ, ಅಕ್ಷಯ್ ಐ. ಪಾಟೀಲ, ಎಂ.ಎಚ್. ಕೋಳಕಾರ, ಶರಣು ಪೂಜಾರ ಸೇರಿದಂತೆ ಸಾವಿರಾರು ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭಾಗವಹಿಸಿದ್ದರು

## ಕೆರೆ ತುಂಬಿಸುವ ಯೋಜನೆ ಹಳ್ಳ ಹಿಡಿಸಿದ್ದೇ ಪಿಟಿಪಿ ಎಂದ ಬಿಜೆಪಿ

ಹೂವಿನಹಡಗಲಿ : 'ಬಿಜೆಪಿ ಸರ್ಕಾರ ಅವಧಿಯಲ್ಲಿ ಮಂಜೂರಾಗಿದ್ದ 10 ಕೆರೆ ತುಂಬಿಸುವ ಯೋಜನೆಯನ್ನು ಮಾಜಿ ಸಚಿವ ಪಿ.ಟಿ.ಪರಮೇಶ್ವರ ನಾಯ್ಕ ಅವೈಜ್ಞಾನಿಕವಾಗಿ 20 ಕೆರೆಗಳಿಗೆ ವಿಸ್ತರಿಸುವ ಮೂಲಕ ಮಹತ್ವಾಕಾಂಕ್ಷಿ ಯೋಜನೆಯನ್ನು ಹಳ್ಳ ಹಿಡಿಸಿದ್ದಾರೆ' ಎಂದು ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎಸ್.ಸಂಜೀವರೆಡ್ಡಿ ಆರೋಪಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕಳಪೆ ಪೈಪ್‌ಗಳನ್ನು ಅಳವಡಿಸಿರುವುದರಿಂದ ಕೆರೆಗಳಿಗೆ ನೀರು ಹರಿಯುತ್ತಿಲ್ಲ. ಅವರು 10 ವರ್ಷ ಶಾಸಕ, ಸಚಿವರಾಗಿದ್ದರೂ ಹೆಚ್ಚುವರಿ ಮೋಟಾರ್, ಟಿಸಿ ವ್ಯವಸ್ಥೆ ಮಾಡಿಸಲಿಲ್ಲ. ಇದರ ವೈಫಲ್ಯಕ್ಕೆ ಅವರೇ ಆತ್ಮಾವಲೋಕನ ಮಾಡಿಕೊಳ್ಳಬೇಕು. ಈ ಯೋಜನೆಯಿಂದ ತಾಲ್ಲೂಕಿನ ಕೆರೆಗಳಿಗೆ ನೀರು ಹರಿಯದಿದ್ದರೂ ಹರಪನಹಳ್ಳಿಯ ಅವರ ಮನೆಗೆ ಹಣದ ಹೊಳೆ ಹರಿದಿದೆ' ಎಂದು ಟೀಕಿಸಿದರು.

'ಶಾಸಕ ಕೃಷ್ಣನಾಯ್ಕ ಕೆರೆಗಳಿಗೆ ನೀರು ಹರಿಸಲು ಇತ್ತೀಚಿಗೆ ಚಾಲನೆ ನೀಡಿದ್ದಾರೆ. ವಿರೋಧ ಪಕ್ಷದಲ್ಲಿದ್ದರೂ ತಮ್ಮ ಇತಿಮಿತಿಯಲ್ಲಿ ಅನುದಾನ ತಂದು ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ರಾಜ್ಯ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ.ಪರಮೇಶ್ವರ ನಾಯ್ಕ ನೀರಾವರಿ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ಶಿಷ್ಟಾಚಾರ ಉಲ್ಲಂಘಿಸಿದ್ದಾರೆ' ಎಂದರು.

'ನಿಗಮ ಮಂಡಳಿ, ಪ್ರಾಧಿಕಾರದ ಹುದ್ದೆಗಳು ಪಕ್ಷಕ್ಕೆ ದುಡಿದ ಕಾರ್ಯಕರ್ತರಿಗೆ ಸಲ್ಲುವಂತವು. ರಾಜ್ಯ ಗ್ಯಾರಂಟಿ ಪ್ರಾಧಿಕಾರಕ್ಕೆ ನೀವು, ತಾಲ್ಲೂಕು ಸಮಿತಿಗೆ ನಿಮ್ಮ ಮಗನನ್ನು ಆಯ್ಕೆ ಮಾಡಿದ್ದೀರಿ. ಇಲ್ಲಿ ಸಮರ್ಥರು ಯಾರೂ ಇಲ್ಲವೇ ? ಕಾರ್ಯಕರ್ತರಿಗೆ ಸಿಗಬೇಕಾದ ಸ್ಥಾನಮಾನಗಳನ್ನೂ ತಂದೆ, ಮಗ ಕಸಿದಿದ್ದಾರೆ' ಎಂದು ವಾಗ್ದಾಳಿ ನಡೆಸಿದರು.

## ಮೇಕೆದಾಟು ಜಲಾಶಯ ನಿರ್ಮಾಣದಿಂದ ಶಿರಾ, ಮಧುಗಿರಿ, ಪಾವಗಡ

# ನೀರಾವರ ಪ್ರದೇಶಗಳಾಗಲಿವೆ; ಟಿ.ಬಿ.ಜಯಚಂದ್ರ

### ಶಿರಾದಲ್ಲಿ ಕುಂಚಿಟಿಗರ ಸಂಘದಿಂದ ಪ್ರತಿಭಾ ಪುರಸ್ಕಾರ



ಶಿರಾ: ರಾಜ್ಯದ ಮಹತ್ವಾಕಾಂಕ್ಷೆಯ ಮೇಕೆದಾಟು ಯೋಜನೆಯಿಂದ ಮೇಕೆದಾಟು ಬಳಿ ಜಲಾಶಯ ನಿರ್ಮಿಸಿದರೆ. ತುಮಕೂರು ಭಾಗ ಮಂಡ್ಯ ಜಿಲ್ಲೆಯ ತರ ನೀರಾವರಿ ಪ್ರದೇಶವಾಗಲಿದೆ. ಶಿರಾ, ಮಧುಗಿರಿ, ಪಾವಗಡ ಭಾಗಗಳು ನೀರಾವರಿ ಪ್ರದೇಶಗಳಾಗಲಿವೆ. ಈ ಯೋಜನೆ ಜಾರಿಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿದ್ದೇನೆ ಎಂದು ಶಾಸಕ ಟಿ.ಬಿ.ಜಯಚಂದ್ರ ಹೇಳಿದರು.

ಅವರು ಶಿರಾದಲ್ಲಿ ತಾಲೂಕು ಕುಂಚಿಟಿಗರ ಸಂಘ, ಕುಂಚಿಟಿಗರ ಚಾರಿಟಬಲ್ ಟ್ರಸ್ಟ್, ದಿ. ಕೆ ಮಲ್ಲಣ್ಣ ಸ್ಮಾರಕ, ದಿ. ಪಿ ಮೂಡ್ಲೇಗೌಡ, ದಿ. ಸಿ ಪಿ ಮೂಡಲಗಿರಿಯಪ್ಪ, ದಿ. ಬಿ ಸತ್ಯನಾರಾಯಣ, ದಿ. ಭುವನಹಳ್ಳಿ ಶ್ರೀನಿವಾಸಯ್ಯ ಅವರ ಸ್ಮರಣಾರ್ಥ ಕುಂಚಿಟಿಗ ಮಕ್ಕಳಿಗೆ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಕುಂಚಿಟಿಗರ ಸಂಘದ ಕಟ್ಟಡಕ್ಕೆ ಭೂಮಿ ಪೂಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಈ ಹಿಂದೆ ನಾನು ಜಿಲ್ಲಾ ಮಂತ್ರಿಯಾಗಿದ್ದಾಗ ಅಂತರ್ಜಲ ವೃದ್ದಿಗಾಗಿ ತಾಲೂಕಿನಲ್ಲಿ ಸುಮಾರು 630 ಕೋಟಿ ವೆಚ್ಚದಲ್ಲಿ 200 ಬ್ಯಾರೇಜ್‌ಗಳನ್ನು

**ಸ್ಪಟಿಕಪುರಿ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ನಂಜಾವಧೂತ ಸ್ವಾಮೀಜಿಗಳು ಮಾತನಾಡಿ ಸಮಾಜದ ನಾಯಕತ್ವ ಗಟ್ಟಿಯಾಗದಿದ್ದರೆ. ನಿಮ್ಮನ್ನು ಯಾರು ಗುರುತಿಸುವುದಿಲ್ಲ. ರಾಜ್ಯದ ಹಿರಿಯ ಶಾಸಕರಾದ ಟಿ.ಬಿ.ಜಯಚಂದ್ರ ಅವರನ್ನು ಸಚಿವರನ್ನಾಗಿ ಮಾಡಬೇಕಿತ್ತು. ಅವರ ಅನುಭವವನ್ನು ಸರಕಾರ ಉಪಯೋಗಿಸಿಕೊಳ್ಳಬೇಕಿತ್ತು. ನೀರಾವರಿ ಯೋಜನೆಯಲ್ಲಿ ಅವರಿಗೆ ಅಪಾರ ಅನುಭವ ಇದೆ. ಮೇಕೆದಾಟು ಯೋಜನೆಯನ್ನು ಸರಕಾರ ಮಾಡಬೇಕು. ನೀರಾವರಿ ಯೋಜನೆಯಲ್ಲಿ ಪರಿಣಾಮಕಾರಿಯಾಗಿ ಮಾಡಬೇಕು ಎಂದರು.**

ನಿರ್ಮಾಣ ಮಾಡಿದ್ದೇನೆ. ಇದರಿಂದ ಸುಮಾರು 2 ಟಿಎಂಸಿ ನೀರು ಶೇಖರಣೆಯಾಗುತ್ತದೆ ಅಂತರ್ಜಲ ವೃದ್ಧಿಯಾಗುತ್ತದೆ. ನೀರಾವರಿ ಯೋಜನೆಗಳು ಹಣಕಾಸಿನ ಮುಗ್ಗಟ್ಟಿನಿಂದ ತಡವಾಗಿವೆ. ಆದರೂ ಶಿರಾ ತಾಲೂಕಿಗೆ ಶಾಶ್ವತ ನೀರಾವರಿ ಪ್ರದೇಶ ಮಾಡುತ್ತೇನೆ ಎಂದರು.

ವಾಣಿ ವಿಲಾಸ ಡ್ಯಾಂ ನಿಂದ 1 ಟಿಎಂಸಿ ನೀರಿ: ಶಿರಾ ತಾಲೂಕಿಗೆ ಕಳೆದ 23 ವರ್ಷಗಳಿಂದ ಹೇಮಾವತಿ ನೀರು ಬರುತ್ತಿದೆ. ಇದರಿಂದ ಶಿರಾ ನಗರ ಸೇರಿದಂತೆ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿದಿದೆ. ಅದೇ ರೀತಿ ಮುಂದಿನ ದಿನಗಳಲ್ಲಿ ತಾಲೂಕಿನ ಎಲ್ಲಾ ಗ್ರಾಮಗಳಿಗೂ ನೀರು ಕೊಡಬೇಕೆಂಬ ಉದ್ದೇಶದಿಂದ ಹಿರಿಯೂರು ತಾಲೂಕಿನ ವಾಣಿ ವಿಲಾಸ ಜಲಾಶಯದಿಂದ ತಾಲೂಕಿಗೆ 1 ಟಿಎಂಸಿ ನೀರು ತರಲು ಪ್ರಯತ್ನ ಮಾಡುತ್ತಿದ್ದೇನೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದು, ಶೀಘ್ರ ಕಾರ್ಯಗತವಾಗಲಿದೆ ಎಂದರು.

ವಿಧಾನಪರಿಷತ್ ಸದಸ್ಯ ಚಿದಾನಂದ ಎಂ ಗೌಡ ಮಾತನಾಡಿ ಕುಂಚಿಟಿಗ ಸಮಾಜ ಶೈಕ್ಷಣಿಕವಾಗಿ ಅಭಿವೃದ್ಧಿಯಾಗಬೇಕು. ನಾನು ವಿದ್ಯಾವಂತನಾದ ಕಾರಣ ಬಡತನದಲ್ಲಿ ಹುಟ್ಟಿ ಬೆಳೆದರೂ ಶಿಕ್ಷಣ ಪಡೆದು ಶಿಕ್ಷಣ ಸಂಸ್ಥೆ ಕಟ್ಟಲು ಸಾಧ್ಯವಾಯಿತು. ವಿದ್ಯಾರ್ಥಿಗಳು ಹಠ ಛಲ ಗುರಿ ಇಟ್ಟುಕೊಂಡರೆ ಸಾಧನೆ ಮಾಡಲು ಸಾಧ್ಯ. ಅಸಾಧ್ಯವಾದುದನ್ನು ಸಾಧಿಸಲು ಹೋದಾಗ ಟೀಕೆಗಳು ಬರುತ್ತವೆ. ಅದಕ್ಕೆ ಧೃತಿಗೆಡಬೇಡಿ. ಯಶಸ್ಸು ಸಾಧಿಸುವಾಗ ಅಡೆತಡೆಗಳು ಸಾಮಾನ್ಯ ಅದಕ್ಕೆ ಹೆದರದೆ ಮುನ್ನಡೆಯಿರಿ ಎಂದ ಅವರು ನಾನು ಕಳೆದ 20 ವರ್ಷಗಳಿಂದ ಸುಮಾರು 1500 ಕ್ಕೂ ಹೆಚ್ಚು ಮಕ್ಕಳಿಗೆ ಪ್ರತಿಭೆ ಆಧಾರದ ಮೇಲೆ ಉಚಿತ ಶಿಕ್ಷಣ ಕೊಟ್ಟಿದ್ದೇನೆ. ಅದರಲ್ಲಿ ಹಲವರು ವೈದ್ಯರಾಗಿದ್ದಾರೆ, ಇಂಜಿನಿಯರ್ ಆಗಿ ಬದುಕು ಕಟ್ಟಿಕೊಂಡಿದ್ದಾರೆ. ವಿದ್ಯಾಧನಕ್ಕಿಂತ ದೊಡ್ಡ ದಾನ ಮತ್ತೊಂದಿಲ್ಲ ಎಂದರು.

ಎಲೆರಾಂಪುರ ಕುಂಚಿಟಿಗ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ಹನುಮಂತನಾಥ ಸ್ವಾಮೀಜಿ ಮಾತನಾಡಿ ಕುಂಚಿಟಿಗ ಸಮುದಾಯ ರಾಜ್ಯದಲ್ಲಿ 27 ಲಕ್ಷ ಜನ ಇದ್ದೇವೆ. ಆದರೂ ನಮ್ಮ ಒಬ್ಬ ಶಾಸಕರನ್ನು ಸಚಿವರನ್ನಾಗಿ ಮಾಡಿಸಲು ಸಾಧ್ಯವಾಗಲಿಲ್ಲ. ಆದ್ದರಿಂದ ಸಮುದಾಯ ಒಗ್ಗಟ್ಟಾಗಿ ಮುಂದಿನ ದಿನಗಳಲ್ಲಿ ರಾಜಕೀಯ ಅಧಿಕಾರ ಪಡೆಯಬೇಕು ಎಂದ ಅವರು ವಿದ್ಯಾರ್ಥಿಗಳು ತಾವು ವಿದ್ಯಾಭ್ಯಾಸ ಮುಗಿಸಿದ ಮೇಲೆ ತಮ್ಮ ತಂದೆ ತಾಯಿಗಳನ್ನು ಚೆನ್ನಾಗಿ ನೋಡಿಕೊಳ್ಳಿ. ಸಮಾಜಕ್ಕೆ ಉತ್ತಮ ಪ್ರಜೆಗಳಾಗಿ. ಮನವಿಯ ಮೌಲ್ಯಗಳನ್ನು ಬೆಳೆಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಸುಮಾರು 35 ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಕೌಶಲ್ಯಾಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ, ಕೇಂದ್ರೀಯ ಜಲಯೋಗದ ನಿವೃತ್ತ ಇಂಜಿನಿಯರ್ ಅಜಿಗೇಶನ್, ಆರ್‌ಡಿಪಿಆರ್ ನಿವೃತ್ತ ನಿರ್ದೇಶಕ ಡಾ. ಭೂವನಹಳ್ಳಿ ನಾಗರಾಜ್, ಕುಂಚಿಟಿಗರ ಸಂಘದ ಅಧ್ಯಕ್ಷ ಮುಕುಂದಪ್ಪ, ಬೆಂಗಳೂರು ಕೃಷಿ ವಿವಿ ನಿವೃತ್ತ ಪ್ರಾಧ್ಯಾಪಕ ಎಲ್ ಮೋಹನ್, ಜೀನಿ ಸಂಸ್ಥೆ ಮುಖ್ಯಸ್ಥ ದಿಲೀಪ್ ಕುಮಾರ್, ನಗರಸಭೆ ಸದಸ್ಯ ಉಮಾ ವಿಜಯರಜ್, ಕುಂಚಿಟಿಗರ ಸಂಘದ ಎಂ ರಂಗನಾಥ್, ಶಶಿಧರ್ ಗೌಡ, ಲಿಂಗದಹಳ್ಳಿ ಸುಧಾಕರ್ ಗೌಡ, ಡಿಸಿ ಅಶೋಕ್, ಷಣ್ಮುಖಪ್ಪ, ಮಹಾಲಿಂಗಪ್ಪ, ಎಸ್ ಎಲ್ ಗೋವಿಂದರಾಜು, ಬಿ ಆರ್ ಜನಾರ್ಧನ, ಹೆಚ್ ಗುರುಮೂರ್ತಿ ಗೌಡ, ವಿಜಯರಾಜ್ ಸೇರಿದಂತೆ ಹಲವರು ಹಾಜರಿದ್ದರು.

# ಹಿರಿಯರನ್ನು ಕಡೆಗಣಿಸುತ್ತಿರುವುದರಿಂದ ವೃದ್ಧಾಶ್ರಮಗಳು ಹೆಚ್ಚಾಗುತ್ತಿವೆ: ಪ್ರಶಾಂತ ಸಾಗರ ಶಿವಾಚಾರ್ಯ



ಕೂಡ್ಲಿಗಿ: ಯುವಕರು ಹಿರಿಯರಿಗೆ ಗೌರವ ನೀಡಿ, ಅವರ ಮಾರ್ಗದರ್ಶನದಲ್ಲಿ ಕುಟುಂಬ ಜೀವನ ನಡೆಸಬೇಕು. ಹಿರಿಯರನ್ನು ಕಡೆಗಣಿಸುತ್ತಿರುವ ಇತ್ತೀಚಿನ ಪ್ರವೃತ್ತಿಯಿಂದಾಗಿ ವೃದ್ಧಾಶ್ರಮಗಳು ಹೆಚ್ಚಾಗುತ್ತಿರುವುದು ವಿಷಾದನೀಯ ಎಂದು ಪ್ರಶಾಂತ ಸಾಗರ ಶಿವಾಚಾರ್ಯರು ಹೇಳಿದರು.

ಕೂಡ್ಲಿಗಿ ಪ್ರವಾಸಿ ಮಂದಿರದಲ್ಲಿ ಕ್ಷೇಮಾಭಿವೃದ್ಧಿ ಸಮಿತಿ ವತಿಯಿಂದ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಇಂದಿನ ಜೀವನದಲ್ಲಿ ನೆಮ್ಮದಿ ಹಾಗೂ ಕುಟುಂಬದ ಬಾಂಧವ್ಯವನ್ನು ಉಳಿಸಿಕೊಳ್ಳಲು ಹಿರಿಯರ ಮಾರ್ಗದರ್ಶನ ಅತ್ಯಂತ ಅಗತ್ಯವಾಗಿದೆ ಎಂದರು.

ಹಿರಿಯರು ಕುಟುಂಬಕ್ಕೆ ಹಾಗೂ ಸಮಾಜಕ್ಕೆ ಬೇರುಗಳಿದ್ದಂತೆ. ಅವರ ಅನುಭವ, ಜ್ಞಾನ ಮತ್ತು ಮಾರ್ಗದರ್ಶನ ಯುವ ಪೀಳಿಗೆಗೆ ದಾರಿದೀಪವಾಗುತ್ತದೆ. ಆದ್ದರಿಂದ ಯುವಕರು ಹಿರಿಯರನ್ನು ಗೌರವದಿಂದ ಕಾಣಬೇಕು ಹಾಗೂ ಅವರ ಸಲಹೆ–ಸೂಚನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಹಿರಿಯ ನಾಗರಿಕರ ಹುಟ್ಟುಹಬ್ಬವನ್ನು ಆಚರಿಸಿ ಗೌರವಿಸಲಾಯಿತು. ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಿವಿಧ ಕ್ರೀಡೆ ಹಾಗೂ ಮನರಂಜನಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿ. ಶಿವರಾಜ್ ವಹಿಸಿದ್ದರು. ತಾಲೂಕು ನೌಕರರ ಸಂಘದ ಅಧ್ಯಕ್ಷ ಎಸ್. ವೆಂಕಟೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆರ್.ಬಿ. ಬಸವರಾಜ್, ನಿವೃತ್ತ ಬಿಇಒ ಪದ್ಮನಾಭಕರಣ, ವಿರುಪಾಕ್ಷಮೂರ್ತಿ, ಗೌರವಾಧ್ಯಕ್ಷೆ ಬ್ಯಾಳಿ ಗೌರಮ್ಮ, ನಂದಿಬಸವರಾಜ್, ಕೆ. ಚೆನ್ನನಗೌಡ್ರು, ಎಲ್. ಸೇವಾ ನಾಯಕ್, ಸುರೇಶ್ ಮುದ್ದೇಬಿಹಾಳ್ ಸೇರಿದಂತೆ ಗಣ್ಯರು ಹಾಗೂ ಹಿರಿಯ ನಾಗರಿಕರು ಉಪಸ್ಥಿತರಿದ್ದರು.

# ಕಸ ವಿಲೇವಾರಿ ಘಟಕಕ್ಕೆ ಶಾಸಕ ಎಸ್. ಸುರೇಶ್ ಕುಮಾರ್ ದಿಢೀರ್ ಭೇಟಿ; ಪುರಸಭಾ ಅಧಿಕಾರಿಗಳಿಗೆ ಎಚ್ಚರಿಕೆ

ಕುಣಿಗಲ್: ಅರಕೆರೆ ಗ್ರಾಮಕ್ಕೆ ಸೇರಿದ ರಾಜ್ಯ ಹೆದ್ದಾರಿ–33ರ ರಸ್ತೆ ಪಕ್ಕದಲ್ಲಿರುವ ಕಸ ವಿಲೇವಾರಿ ಘಟಕಕ್ಕೆ ರಾಜಾಜಿನಗರ ಶಾಸಕ ಎಸ್. ಸುರೇಶ್ ಕುಮಾರ್ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಸ ಸಂಸ್ಕರಣಾ ಘಟಕದಲ್ಲಿ ಬೆಂಕಿ ಹೊತ್ತಿ ಉರಿಯುತ್ತಿರುವುದನ್ನು ಕಂಡು ಅವರು ಅಸಮಾಧಾನ ವ್ಯಕ್ತಪಡಿಸಿದರು. ಗ್ರಾಮಸ್ಥರಾದ ಶೆಟ್ಟಿಗೆಹಳ್ಳಿ ಶ್ರೀನಿವಾಸ್ ಅವರ ಮನವಿ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಸುರೇಶ್ ಕುಮಾರ್ ಅವರು, ಘಟಕದಲ್ಲಿ ಬೆಂಕಿ ಹೊತ್ತಿಕೊಂಡಿರುವುದು ಹಾಗೂ ಕಸದ ರಾಶಿಯಿಂದ ಉಂಟಾಗುತ್ತಿರುವ ಅವ್ಯವಸ್ಥೆಯನ್ನು ಗಮನಿಸಿದರು. ಈ ವೇಳೆ ಸ್ಥಳೀಯ ಗ್ರಾಮಸ್ಥರು ಶಾಸಕರನ್ನು ಭೇಟಿ ಮಾಡಿ ಪುರಸಭೆಯ ವಿರುದ್ಧ ಹಲವು ದೂರುಗಳನ್ನು ಸಲ್ಲಿಸಿದರು. ಕಸ ವಿಲೇವಾರಿ ಘಟಕದಲ್ಲಿ ಪ್ರತಿನಿತ್ಯ ಬೆಂಕಿ ಹೊತ್ತಿಕೊಳ್ಳುತ್ತಿದ್ದು, ಈ ಕುರಿತು ಪುರಸಭೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದ್ದರೂ ಯಾವುದೇ ಶಾಶ್ವತ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದರು. ಕಸದಿಂದ ದುರ್ವಾಸನೆ ಹಾಗೂ ವಿಷಕಾರಿ ಹೊಗೆ ಹರಡುತ್ತಿದ್ದು, ಇದರಿಂದ ಸುತ್ತಮುತ್ತಲಿನ ಜನರು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಹೃದಯ ಸಂಬಂಧಿ ಕಾಯಿಲೆ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿವೆ ಎಂದು ಗ್ರಾಮಸ್ಥರು ತಮ್ಮ ಅಳಲು ತೋಡಿಕೊಂಡರು.



ತಕ್ಷಣವೇ ಶಾಸಕ ಎಸ್. ಸುರೇಶ್ ಕುಮಾರ್ ಅವರು ಪುರಸಭೆ ಮುಖ್ಯಾಧಿಕಾರಿ ರವಿಕುಮಾರ್ ಅವರಿಗೆ ದೂರವಾಣಿ ಕರೆ ಮಾಡಿ ತೀವ್ರ ತರಾಟೆಗೆ ತೆಗೆದುಕೊಂಡರು. ಕಸ ಸಂಸ್ಕರಣಾ ಘಟಕದ ಅವ್ಯವಸ್ಥೆಯಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದರೂ ಅಧಿಕಾರಿಗಳು ಏಕೆ ಗಮನಹರಿಸಿಲ್ಲ ಎಂದು ಪ್ರಶ್ನಿಸಿದರು. ಈ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗಿದ್ದರೂ ಕ್ರಮ ಕೈಗೊಳ್ಳದಿರುವುದು ಸರಿಯಲ್ಲ. ಮೊದಲು ಕಸ ವಿಲೇವಾರಿ ಘಟಕದ ಸಮಸ್ಯೆಯನ್ನು ಬಗೆಹರಿಸಬೇಕು. ಇಲ್ಲದಿದ್ದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಅಧಿಕಾರಿಗಳು ಕ್ರಮ ಕೈಗೊಳ್ಳದಿದ್ದರೆ ಈ ವಿಷಯವನ್ನು ವಿಧಾನಸಭೆಯಲ್ಲಿ ಪ್ರಸ್ತಾಪಿಸಬೇಕಾಗುತ್ತದೆ. ಜನರ ಜೀವದೊಂದಿಗೆ ಆಟವಾಡುವುದನ್ನು ನಿಲ್ಲಿಸಿ, ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಖಡಕ್ ಸೂಚನೆ ನೀಡಿದರು.

ಇದೇ ವೇಳೆ ಕುಣಿಗಲ್ ಪುರಸಭೆಯ ಶೌಚಾಲಯಗಳು, ಕುಡಿಯುವ ನೀರಿನ ಘಟಕಗಳು ಹಾಗೂ ಉದ್ಯಾನವನಗಳ ಸಮಸ್ಯೆಗಳ ಬಗ್ಗೆಯೂ ಶಾಸಕ ಸುರೇಶ್ ಕುಮಾರ್ ಗಮನ ಸೆಳೆದರು. ಜನರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಹಾಗೂ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು. ಕುಣಿಗಲ್ ತಾಲೂಕು ಹಾಗೂ ನಗರದ ಕಸ, ಕುಡಿಯುವ ನೀರು ಮತ್ತು ಶೌಚಾಲಯಗಳ ಸಮಸ್ಯೆಗಳ ಕುರಿತು ಹಲವು ಬಾರಿ ಪತ್ರಿಕೆಗಳಲ್ಲಿ ವರದಿಯಾಗಿದ್ದರೂ ಸಂಬಂಧಪಟ್ಟವರು ಏಕೆ ಗಮನಹರಿಸುತ್ತಿಲ್ಲ ಎಂದು ಪ್ರಶ್ನಿಸಿದರು. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಕರ್ತವ್ಯವಾಗಿದೆ ಎಂದರು. ಕಸ ಸಂಸ್ಕರಣಾ ಘಟಕ, ಕುಡಿಯುವ ನೀರು, ಶೌಚಾಲಯಗಳು ಹಾಗೂ ಉದ್ಯಾನವನಗಳ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ನಡೆಸಬೇಕಾಗುತ್ತದೆ ಎಂದು ಶಾಸಕ ಎಸ್. ಸುರೇಶ್ ಕುಮಾರ್ ಎಚ್ಚರಿಕೆ ನೀಡಿದರು.

# ಶ್ರೀ ಭೈರವೇಶ್ವರ ಸಹಕಾರ ಬ್ಯಾಂಕ್‌ನ 41ನೇ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರ



ತುಮಕೂರು: ನಗರದ ಜೈನ್ ಭವನದಲ್ಲಿ ಶ್ರೀ ಭೈರವೇಶ್ವರ ಸಹಕಾರ ಬ್ಯಾಂಕ್ ನಿಯಮಿತದ 2025–26ನೇ ಸಾಲಿನ ಸರ್ವ ಸದಸ್ಯರ 41ನೇ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಬ್ಯಾಂಕ್ ಅಧ್ಯಕ್ಷ ಟಿ.ಆರ್. ಚಿಕ್ಕರಂಗಯ್ಯ ಅವರು, ತಮ್ಮನ್ನು ಮೂರನೇ ಬಾರಿಗೆ ಬ್ಯಾಂಕ್ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದಕ್ಕೆ ನಿರ್ದೇಶಕರು ಹಾಗೂ ಸರ್ವ ಸದಸ್ಯರಿಗೆ ಕೃತಜ್ಞತೆ ಸಲ್ಲಿಸಿದರು. ಬ್ಯಾಂಕ್ ಬೆಳವಣಿಗೆಯಲ್ಲಿ ಪ್ರತಿಯೊಬ್ಬ ಸದಸ್ಯರ ಸಹಕಾರ ಮತ್ತು ವಿಶ್ವಾಸ ಮಹತ್ವದ ಪಾತ್ರ ವಹಿಸಿದೆ. ತಮ್ಮ ಮೇಲೆ ನಂಬಿಕೆ ಇಟ್ಟು ಮೂರನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆ ಮಾಡಿರುವುದಕ್ಕೆ ಎಲ್ಲ ಸದಸ್ಯರಿಗೆ ಧನ್ಯವಾದಗಳನ್ನು ಅರ್ಪಿಸಿದರು.

ಬ್ಯಾಂಕ್‌ನ ಆರ್ಥಿಕ ಪ್ರಗತಿ, ಠೇವಣಿ ಸಂಗ್ರಹ ಹಾಗೂ ಸಾಲ ಸೌಲಭ್ಯಗಳ ವಿಸ್ತರಣೆ ಸೇರಿದಂತೆ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಮುಂದಿನ ಆರ್ಥಿಕ ವರ್ಷದ ಕಾರ್ಯಯೋಜನೆಗಳ ಬಗ್ಗೆಯೂ ಸವಿಸ್ತಾರವಾಗಿ ಸಮಾಲೋಚನೆ ನಡೆಸಲಾಯಿತು.

ಮಹಾಸಭೆಯ ಅಂಗವಾಗಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತ್ಯಧಿಕ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಅಭಿನಂದಿಸಿದ ಬ್ಯಾಂಕ್ ಆಡಳಿತ ಮಂಡಳಿ, ಮುಂದಿನ ವಿದ್ಯಾಭ್ಯಾಸದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿತು.

ಕಾರ್ಯಕ್ರಮದಲ್ಲಿ ಬ್ಯಾಂಕ್ ಉಪಾಧ್ಯಕ್ಷ ನಟೇಶ್ ಕೆ., ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ ವರ್ಗ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಬ್ಯಾಂಕ್‌ನ ಸದಸ್ಯರು ಉಪಸ್ಥಿತರಿದ್ದರು.

# ಸ್ನಾನಘಟ್ಟದ ನೀರಲ್ಲಿ ಕೊಚ್ಚಿಕೊಂಡು ಹೋಗಿದ್ದ ಯಾಸ್ಮೀನ್ ಮೃತದೇಹ ಪತ್ತೆ

ಬಳ್ಳಾರಿ: ಹಂಪಿಯ ವಿರೂಪಾಕ್ಷ ದೇವಸ್ಥಾನದ ಸಮೀಪದ ಸ್ನಾನಘಟ್ಟದಲ್ಲಿ ಶನಿವಾರ ಬೆಳಿಗ್ಗೆ ಸ್ನಾನ ಮಾಡುವಾಗ ನೀರಲ್ಲಿ ಕೊಚ್ಚಿಕೊಂಡು ಹೋಗಿದ್ದ ಯಾಸ್ಮೀನ್ (17) ಅವರ ಮೃತದೇಹ ಘಟನಾ ಸ್ಥಳದಿಂದ ಸುಮಾರು ಒಂದು ಕಿಲೋಮೀಟರ್ ದೂರದ ಚಕ್ರತೀರ್ಥದಲ್ಲಿ ಭಾನುವಾರ ಸಂಜೆ ಪತ್ತೆಯಾಗಿದೆ.



ದಾವಣಗೆರೆಯಿಂದ ಬಂದಿದ್ದ 11 ಮಂದಿಯ ಎಸ್‌ಡಿಆರ್‌ಎಫ್ ತಂಡ, ಹೊಸಪೇಟೆಯ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಈಜುಗಾರರು ಭಾನುವಾರ ಬೆಳಿಗ್ಗೆಯಿಂದಲೇ ತೆಪ್ಪ, ದೋಣಿಗಳ ಸಹಾಯದಿಂದ ಹುಡುಕಾಟ ನಡೆಸಿದ್ದರು. ಸಂಜೆ ಚಕ್ರತೀರ್ಥದಲ್ಲಿ ಶವ ಪತ್ತೆಯಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

ಎಸ್‌ಡಿಆರ್‌ಎಫ್ ತಂಡ, ಹೊಸಪೇಟೆಯ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಈಜುಗಾರರು ಭಾನುವಾರ ಬೆಳಿಗ್ಗೆಯಿಂದಲೇ ತೆಪ್ಪ, ದೋಣಿಗಳ ಸಹಾಯದಿಂದ ಹುಡುಕಾಟ ನಡೆಸಿದ್ದರು.

ಎಸ್‌ಡಿಆರ್‌ಎಫ್ ತಂಡ, ಹೊಸಪೇಟೆಯ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಈಜುಗಾರರು ಭಾನುವಾರ ಬೆಳಿಗ್ಗೆಯಿಂದಲೇ ತೆಪ್ಪ, ದೋಣಿಗಳ ಸಹಾಯದಿಂದ ಹುಡುಕಾಟ ನಡೆಸಿದ್ದರು.

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಕೌತಳದ 12 ಮಂದಿಯ ಕುಟುಂಬ ಸದಸ್ಯರು ಕ್ರೂಸರ್ ವಾಹನದಲ್ಲಿ ಶುಕ್ರವಾರ ಸಂಜೆ ಹಂಪಿಗೆ ಪ್ರವಾಸ ಬಂದಿದ್ದರು. ರಾತ್ರಿ ವಿರೂಪಾಕ್ಷ ದೇವಸ್ಥಾನದ ಸಮೀಪದಲ್ಲೇ ತಂಗಿ ಶನಿವಾರ ಬೆಳಿಗ್ಗೆ ಅಡುಗೆ ಮಾಡಿಕೊಂಡಿದ್ದರು.

ಸ್ನಾನ ಮಾಡಲು ಸ್ನಾನಘಟ್ಟದಲ್ಲಿ ನೀರಿಗೆ ಇಳಿದಿದ್ದಾಗ ಯಾಸ್ಮೀನ್ ಜಾರುವ ಕಲ್ಲಿಗೆ ಕಾಲಿಟ್ಟು ನೀರುಪಾಲಾಗಿದ್ದರು. ಅವರನ್ನು ರಕ್ಷಿಸಲು ಯತ್ನಿಸಿದ್ದ ಅವರ ತಾಯಿ ಶಾಹೀನ್ ಸಹ ನೀರುಪಾಲಾಗಿದ್ದರು. ತೀವ್ರ ಹುಡುಕಾಟದ ಬಳಿಕ 200 ಮೀಟರ್ ಅಂತರದಲ್ಲಿ ಜನತಾ ಪ್ಲಾಟ್ ಬಳಿ ಶಾಹೀನ್ ಅವರ ಮೃತದೇಹ ಶನಿವಾರ ಸಂಜೆ ಪತ್ತೆಯಾಗಿತ್ತು.

ಆದರೆ ಯಾಸ್ಮೀನ್ ಪತ್ತೆಯಾಗಿರಲಿಲ್ಲ.

ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಮೃತದೇಹಗಳನ್ನು ಅವರ ಕುಟುಂಬದವರಿಗೆ ಹಸ್ತಾಂತರಿಸಲಾಗುವುದು, ಸದ್ಯ ಆ ಪ್ರಕ್ರಿಯೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹಂಪಿ ಪ್ರವಾಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.